# ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 129 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 07–12–2024 ಶನಿವಾರ | ಪುಟ: 4 | ಬೆಲೆ : ರೂ.2–00
Volume - 02 Issue - 129 | RNI No: KARKAN/2023/88462 | Chitradurga | Date: 07-12-2024 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಬೇಡಿಕೆ ಈಡೇರಿಕೆಗಾಗಿ ಡಿ.9ರಂದು ರೈತರಿಂದ ಸುವರ್ಣಸೌಧ ಮುತ್ತಿಗೆ 2

ರೂ.2.05 ಕೋಟಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ವೀರೇಂದ್ರ ಪಪ್ಪಿ ಚಾಲನೆ 3

ಎಲ್ಲಿ ಜೀವನ ನಡೆವುದೋ ಅದೇ ನನ್ನೂರು....... 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಪೂರ್ವ ಭಾವಿ ಸಭೆ ಮುಂದೂಡಿಕೆ

» ಹೊಸದುರ್ಗ

ಪಟ್ಟಣದ ಅಭಿವೃದ್ಧಿಯ ವಿಚಾರವಾಗಿ 2025–26 ನೇ ಸಾಲಿನ ಆಯ–ವ್ಯಯವನ್ನು ಸಿದ್ದಪಡಿಸುವ ಸಲುವಾಗಿ ಪುರಸಭಾ ಅಧ್ಯಕ್ಷೆ ಶ್ರೀಮತಿ ರಾಜೇಶ್ವರಿ ಆನಂದ್ ಅವರ ಅಧ್ಯಕ್ಷತೆಯಲ್ಲಿ ಡಿ.7 ರಂದು ಶನಿವಾರ (ಇಂದು) ಬೆಳಿಗ್ಗೆ 11.30 ಗಂಟೆಗೆ ಕರೆಯಲಾಗಿದ್ದ ಸಾರ್ವಜನಿಕರ ಪೂರ್ವಭಾವಿ ಸಭೆಯನ್ನಕಾರಣಾಂತರದಿಂದಮುಂದೂಡಲಾಗಿದೆ ಎಂದು ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ.ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ತಂಬಾಕು ಮಾರಟಕ್ಕೆ ಪರವಾನಿಗೆ ಕಡ್ಡಾಯ

» ಹೊಸದುರ್ಗ

ನಗರದ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನ ಮಾರಟ ಮಾಡಲು ಅಂಗಡಿ ವ್ಯಾಪರಿಗಳು ಉದ್ದಿಮೆ ಪರವಾನಿಗೆ ಜೊತೆಗೆ ತಂಬಾಕು ಪರವಾನಿಗೆ ಪಡೆಯುವುದು ಕಡ್ಡಾಯವಾಗಿದೆ. ಎಂದು ಪುರಸಭೆ ಮುಖ್ಯಾಧಿಕಾರಿಯವರಾದ ತಿಮ್ಮರಾಜು ಜಿ ವಿ ತಂಬಾಕು ವ್ಯಾಪರಿಗಳಿಗೆ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು ಪುರಸಭೆಯಲ್ಲಿ ಅರ್ಜಿ ನಮೂನೆ ಪಡೆದು ಅಗತ್ಯ ದಾಖಲಾತಿಗಳೊಂದಿಗೆ ಪರವಾನಿಗೆ ಶುಲ್ಕ 500/– ರೂ. ಪಾವತಿಸಿ ಅರ್ಜಿಸಲ್ಲಿಸಬೇಕು ಪರವಾನಿಗೆ ಅವದಿ ಒಂದು ವರ್ಷ ಚಾಲ್ತಿಯಲ್ಲಿರುತ್ತದೆ ಡಿಸೆಂಬರ್ 15 ರ ಒಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದ್ದು ತಂಬಾಕು ಪರವಾನಿಗೆ ದಾಖಲೆಗಳಾದ ಅಧಾರ್ ಕಾರ್ಡ ಜೆರಾಕ್ಸ್ ಬಾಡಿಗೆಕಾರರು ಪೋಟೊ. ದಾಖಲೆಗಳನ್ನು ಸಲ್ಲಿಸುವುದು ಕಡ್ಡಾಯವಾಗಿರುತ್ತದೆ. ತಂಬಾಕು ಪರವಾನಿಗೆ ಪಡೆದುಕೊಳ್ಳದೆ ತಂಬಾಕು ಉತ್ಪನ್ನಗಳನ್ನು ಮಾರಟ ಮಾಡುವವರ ಮೇಲೆ ದಂಡವಿದಿಸಿ ಉದ್ದೀಮೆ ಪರವಾನಿಗೆ ರದ್ದುಪಡಿಸಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

### ಇಂದು ವಿದ್ಯುತ್ ವ್ಯತ್ಯಯ

» ಚಿತ್ರದುರ್ಗ

ಚಿತ್ರದುರ್ಗ ಬೆಸ್ಕಾಂ ಗ್ರಾಮೀಣ ಉಪವಿಭಾಗ ವ್ಯಾಪ್ತಿಯಲ್ಲಿ ಬರುವ ಪಂಡರಹಳ್ಳಿ ವಿ.ವಿ ಕೇಂದ್ರದ ಆವರಣದಲ್ಲಿ ಬೃಹತ್ ಕಾಮಗಾರಿ ವಿಭಾಗ ಕೆ.ಪಿ.ಟಿ.ಸಿ.ಎಲ್ ನವರು 66 ಕೆ.ವಿ ಗೋಪುರ ನಿರ್ಮಾಣಹಮ್ಮಿಕೊಂಡಿರುವುದರಿಂದಡಿ.7ರಂದು ಬೆಳಿಗ್ಗೆ 10 ರಿಂದ ಸಂಜೆ 7ರವರೆಗೆ ಪಂಡರಹಳ್ಳಿ ವಿದ್ಯುತ್ ವಿತರಣಾ ಕೇಂದ್ರದಿಂದ ಸರಬರಾಜಾಗುವ ಎನ್.ಜೆ.ವೈ ಮತ್ತು ಐ.ಪಿ ಮಾರ್ಗಗಳಿಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ.ವಿದ್ಯುತ್ ಅಡಚಣೆಯಾಗುವ ಪ್ರದೇಶಗಳು: 66/11 ಕೆವಿ ಪಂಡರಹಳ್ಳಿ ವಿವಿ ಕೇಂದ್ರದಿಂದ ಸರಬರಾಜಾಗುವ 11ಕೆವಿ ಮಾರ್ಗಗದ ಅನ್ನೆಹಾಳ್, ಹುಲ್ಲೂರು ಎನ್.ಜೆ.ವೈ, ಪಂಡರಹಳ್ಳಿ ಕಾವಲಹಟ್ಟಿ, ಕುರುಬರಹಳ್ಳಿ, ಬೆಟ್ಟದನಾಗೇನಹಳ್ಳಿ, ಸಿಂಗಾಪುರ, ಕಕ್ಕೇರು, ಕಾವಲಹಟ್ಟಿ, ಮಹದೇವನಕಟ್ಟೆ, ಗೊಡಬನಾಳ್, ಸೊಂಡೆಕೊಳ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಚಿತ್ರದುರ್ಗ ಬೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪಿಡಿಓ ಸ್ವರ್ಧಾತ್ಮಕ ಪರೀಕ್ಷೆ: ನಿಷೇದಾಜ್ಞೆ ಜಾರಿ

» ಚಿತ್ರದುರ್ಗ

ಇದೇ ಡಿ.07 ಮತ್ತು 8 ರಂದು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ನೇಮಕಾತಿಗೆ ಕನ್ನಡ ಭಾಷಾ ಪರೀಕ್ಷೆ ಮತ್ತು ಸ್ವರ್ಧಾತ್ಮಕ ಪರೀಕ್ಷೆಗಳನ್ನು ನಿಯಮಗಳಂತೆ ನಡೆಸುವ ಸಂಬಂಧ ಪರೀಕ್ಷಾ ಕೇಂದ್ರಗಳಲ್ಲಿನ ಅವ್ಯವಹಾರ ತಡೆಗಟ್ಟಲು ಪರೀಕ್ಷಾ ಕೇಂದ್ರಗಳ ಸುತ್ತಲೂ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಟಿ.ವೆಂಕಟೇಶ್ ಆದೇಶಿಸಿದ್ದಾರೆ. ಡಿ.07ರಂದು ಕನ್ನಡ ಭಾಷಾ ಪರೀಕ್ಷೆ ಚಿತ್ರದುರ್ಗ ನಗರದಲ್ಲಿ 28 ಕೇಂದ್ರಗಳಲ್ಲಿ ಹಾಗೂ ಚಳ್ಳಕೆರೆ ನಗರದಲ್ಲಿ 01 ಪರೀಕ್ಷಾ ಕೇಂದ್ರದಲ್ಲಿ ಮತ್ತು ಡಿ.08ರಂದು ಸಾಮಾನ್ಯ ಜ್ಞಾನ ಪರೀಕ್ಷೆ ಚಿತ್ರದುರ್ಗ ನಗರದಲ್ಲಿ 30 ಪರೀಕ್ಷಾ ಕೇಂದ್ರಗಳು ಹಾಗೂ ಚಳ್ಳಕೆರೆ ನಗರದಲ್ಲಿ 10 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಈ ಪರೀಕ್ಷಾ ಕೇಂದ್ರಗಳಲ್ಲಿ ಅವ್ಯವಹಾರಗಳನ್ನು ತಡೆಗಟ್ಟಲು ಪರೀಕ್ಷೆ ನಡೆಯುವ ದಿನಾಂಕದಂದು ಪರೀಕ್ಷಾ ಕೇಂದ್ರಗಳ 200 ಮೀಟರ್ ಸುತ್ತ ಸಿ.ಆರ್.ಪಿ.ಸಿ ಕಲಂ 144ರಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ ನಿಷೇಧಾಜ್ಞೆ ಜಾರಿಗೊಳಿಸಿದ್ದಾರೆ.

---

**ಅಂಬೇಡ್ಕರ್‌ರವರ ಚಿಂತಾನ ಶಕ್ತಿ ಆದರ್ಶಗಳು ಸಮಾಜಕ್ಕೆ ವಿಶೇಷ ಬೆಳಕು: ಶಾಸಕ ಟಿ.ರಘುಮೂರ್ತಿ**

# ಆಡಳಿತಕ್ಕೆ ಅಂಬೇಡ್ಕರ್ ಸಂವಿಧಾನವೆ ಪ್ರೇರಣೆ

» ಚಳ್ಳಕೆರೆ

ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ರಾಷ್ಟ್ರಕ್ಕೆ ನೀಡಿದ ಸಂವಿಧಾನ ಸದಾ ಶಾಶ್ವತ. ಅದೇ ರೀತಿ ಡಾ.ಬಿ.ಆರ್. ಅಂಬೇಡ್ಕರ್‌ರವರ ಬದುಕು, ಆದರ್ಶಗಳು ದೇಶಕ್ಕೆ ಬೆಳಕು ನೀಡಿವೆ ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಅಂಬೇಡ್ಕರ್ ವೃತ್ತದಲ್ಲಿ ಶುಕ್ರವಾರ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್‌ರವರ 68ನೇ ಪರಿನಿಬ್ಬಾಣ ದಿನಾಚರಣೆಯನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ನಾಡಿನ ಸ್ವಾತಂತ್ರ್ಯಕ್ಕೆ ಅನೇಕ ರೀತಿಯ ಹೋರಾಟಗಳು ನಡೆದಿವೆ. ಸ್ವಾತಂತ್ರ್ಯ ಪಡೆದ ನಂತರ ರಾಷ್ಟ್ರದ ಆಡಳಿತವನ್ನು ಸುಲಲಿತವಾಗಿ ನಡೆಸಲು ಅಂಬೇಡ್ಕರ್ ಸಂವಿಧಾನನಮ್ಮೆಲ್ಲರಿಗೂಸ್ಪೂರ್ತಿಯಾಗಿದೆ. ಸಮಾಜದ ಸರ್ವತೋಮುಖ ಅಭಿವೃದ್ಧಿಗೆ ಸಂವಿಧಾನ ಪ್ರೇರಣೆಯಾಗಿದೆ. ತಮ್ಮ ಇಡೀ ಬದುಕಿನಲ್ಲಿ ಹಲವಾರು ಜಟಿಲ ಸಮಸ್ಯೆಗಳನ್ನು ದೈರ್ಯವಾಗಿ ಎದುರಿಸಿ






ರಾಷ್ಟ್ರದ ಸರ್ವತೋಮುಖ ಅಭಿವೃದ್ಧಿಗೆ ಅವಶ್ಯವಿರುವ ಆಡಳಿತಾತ್ಮಕ ವಿಚಾರಗಳನ್ನು ಸಂವಿಧಾನದ ಮೂಲಕ ಅಂಬೇಡ್ಕರ್ ನಮಗೆ ನೀಡಿದ್ದಾರೆ. ಅವರ ಮಹಾನ್ ಕೊಡುಗೆಯ ಬಗ್ಗೆ ವಿಶ್ವದಲ್ಲೇ ಮೆಚ್ಚುಗೆ ವ್ಯಕ್ತವಾಗಿದೆ. ಸಮುದಾಯದ ಎಲ್ಲಾ ಸಂಘಟನೆಗಳು ಅಂಬೇಡ್ಕರ್ ಆದರ್ಶ ಅಳವಡಿಸಿಕೊಂಡು ಮುನ್ನಡೆಯಬೇಕು ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ, ಶೋಷಿತ ಸಮುದಾಯವನ್ನು ರಕ್ಷಣೆ ಮಾಡುವಲ್ಲಿ ಸಂವಿಧಾನ ನಮಗೆ ಎಲ್ಲಾ ಸಹಕಾರ ನೀಡಿದೆ. ಮೀಸಲಾತಿಯೂ ಸೇರಿದಂತೆ ಹಲವಾರು ಕ್ಲಿಷ್ಟ ವಿಚಾರಗಳನ್ನು ಎಲ್ಲರೊಂದಿಗೆಚರ್ಚಿಸಿ ಬಗೆಹರಿಸುವ ಮೂಲಕ ದೇಶದ ಬಡ ಜನರ ಅಭಿವೃದ್ಧಿಗೆ ಅಂಬೇಡ್ಕರ್ ಸಂವಿಧಾನ ಹೆಚ್ಚು ಸಹಕಾರಿಯಾಗಿದೆ. ಅಂಬೇಡ್ಕರವರುಲ್ಲದ ಆಡಳಿತ ಕಲ್ಪಿಸಿಕೊಳ್ಳುವುದು ಕಷ್ಟಕರ ವೆಂದರು. ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷೆ ಜೈತುಂಬಿ, ಸದಸ್ಯರಾದ ಬಿ.ಟಿ. ರಮೇಶ್‌ಗೌಡ, ಎಂ.ಜೆ.ರಾಘವೇಂದ್ರ, ಟಿ.ಮಲ್ಲಿಕಾರ್ಜುನ್, ಕೆ.ವೀರಭದ್ರಪ್ಪ, ಚಳ್ಳಕೆರೆಯಪ್ಪ, ಕವಿತಾಬೋರಯ್ಯ, ಸುಮ, ಪೌರಾಯುಕ್ತ ಜಗರೆಡ್ಡಿ, ಬಿಇಒ ಕೆ.ಎಸ್.ಸುರೇಶ್.ಸಿಡಿಪಿಒ ಹರಿಪ್ರಸಾದ್, ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ಭೂತಲಿಂಗಪ್ಪ, ಮಂಜುನಾಥ, ಟಿ.ವಿಜಯಕುಮಾರ್, ಮೈತ್ರಿದ್ಯಾಮಣ್ಣ, ಚಂದ್ರು, ಎಂ.ಇಂದ್ರೇಶ್, ಆರ್.ವೀರಭದ್ರಪ್ಪ,ರಂಗಸ್ವಾಮಿ,ದೇವರಾಜ, ಡಿ.ಶ್ರೀನಿವಾಸ್, ಉಮೇಶ್‌ಚಂದ್ರಬ್ಯಾನರ್ಜಿ, ಸಮರ್ಥರಾಯ್, ಭೀಮನಕೆರೆಶಿವಮೂರ್ತಿ, ಓ.ರಂಗಸ್ವಾಮಿ, ನಾಗರಾಜು, ತಿಪ್ಪೇಸ್ವಾಮಿ ಉಪಸ್ಥಿತರಿದ್ದರು.

---

# ಡಾ.ಅಂಬೇಡ್ಕರ್ ಮಹಾ ಪರಿನಿರ್ವಾಣ ದಿನ ಆಚರಣೆ





» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ 68ನೇ ಪುಣ್ಯಸ್ಮರಣೆ (ಮಹಾ ಪರಿನಿರ್ವಾಣ) ದಿನ ಕಾರ್ಯಕ್ರಮ ಶುಕ್ರವಾರ ನಡೆಯಿತು. ಇಲ್ಲಿನ ನಗರಸಭೆ ಹತ್ತಿರವಿರುವ ಡಾ.ಬಿ.ಆರ್. ಅಂಬೇಡ್ಕರ್‌ರವರ ಪ್ರತಿಮೆಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅವರು ಮಾಲಾರ್ಪಣೆ, ಪುಷ್ಪಾರ್ಚನೆ ಮಾಡಿ, ಗೌರವ ನಮನ ಸಲ್ಲಿಸಿದರು.ಇದೇ ಸಂದರ್ಭದಲ್ಲಿ ಸಂವಿಧಾನದ ಪೀಠಿಕೆಯನ್ನು ಬೋಧಿಸಲಾಯಿತು.ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಪುಟ್ಟಸ್ವಾಮಿ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಸಮುದಾಯದ ಮುಖಂಡರು, ಸಂಘಟನೆಗಳ ಪದಾಧಿಕಾರಿಗಳು, ಸಾರ್ವಜನಿಕರು, ವಿದ್ಯಾರ್ಥಿಗಳು, ಡಾ.ಬಿ.ಆರ್. ಅಂಬೇಡ್ಕರ್‌ರವರ ಅನುಯಾಯಿಗಳು ಇದ್ದರು

---

# ಶಾಸಕ ಚಂದ್ರಪ್ಪ ಮೇಲೆ ಮಾಡಿದ ಆರೋಪ ಸುಳ್ಳು: ಸಿದ್ದೇಶ್



» ಚಿತ್ರದುರ್ಗ

ಹೊಳಲ್ಕೆರೆ ಶಾಸಕರಾದ ಎಂ.ಚಂದ್ರಪ್ಪರವರು ಈ ಕ್ಷೇತ್ರದಲ್ಲಿ ವಿವಿಧ ರೀತಿಯ ಅಭೀವೃದ್ಧಿ ಕಾರ್ಯವನ್ನು ಮಾಡಿದ್ದಾರೆ ಅವರು ಯಾವುದೇ ಭ್ರಷ್ಠಾಚಾರವನ್ನು ಮಾಡಿಲ್ಲ ಸದಾ ಕ್ಷೇತ್ರದ ಅಭೀವೃದ್ಧಿಯ ಬಗ್ಗೆ ಚಿಂತನೆಯನ್ನು ನಡೆಸುತ್ತಾರೆ. ಇಂತಹರನ್ನು ಪಕ್ಷದಲ್ಲಿ ಇಲ್ಲದ ವ್ಯಕ್ತಿ ಇವರು ಅನ್ಯಾಯ ಮಾಡಿದ್ದಾರೆ, ಭ್ರಷ್ಠಾಚಾರ ಮಾಡಿದ್ದಾರೆ ಕ್ಷೇತ್ರವನ್ನು ಅಭೀವೃದ್ಧಿ ಮಾಡಿಲ್ಲ ಎಂದು ಆರೋಪಿಸಿ ಇವರನ್ನು ಪಕ್ಷದಿಂದ ಉಚ್ಚಾಟಿಸುವಂತೆ ಆಗ್ರಹಿಸಿರುವುದು ಸರಿಯಲ್ಲ ಎಂದು ಹೊಳಲ್ಕೆರೆ ಬಿಜೆಪಿ ಮಂಡಲ ಅಧ್ಯಕ್ಷ ಸಿದ್ದೇಶ್ ತಿಳಿಸಿದ್ದಾರೆ. ಚಿತ್ರದುರ್ಗ ನಗರದ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2008 ವಿಧಾನಸಭಾ ಚುನಾವಣೆಯಿಂದ ಹಿಡಿದು 2024ರ ಚುನಾವಣೆಯವರೆಗೂ ಚಂದ್ರಪ್ಪರವರ ಮೇಲೆ ಆರೋಪ ಮಾಡಿದ ಜಯಸಿಂಹ ಪಕ್ಷದ ಪರವಾಗಲಿ, ಚಂದ್ರಪ್ಪರವರ ಪರವಾಗಲಿ ಚುನಾವಣೆಯಲ್ಲಿ ಕೆಲಸವನ್ನು ಮಾಡಿಲ್ಲ ಇದರ ಬದಲಿ ಚಂದ್ರಪ್ಪರವರ ವಿರುದ್ದ ಬೇರೆಯವರನ್ನು ನಿಲ್ಲಿಸಿ ಅವರು ಚುನಾವಣೆಯಲ್ಲಿ ಸೋಲುವಂತೆ ಮಾಡಿದ್ದಾರೆ.

ಪುಟ 2

---

## ಪ್ರಮುಖ ಸುದ್ದಿ

**ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮ**

# ದುಶ್ಚಟ ತೊರೆದು ಸೃಜನಶೀಲ ಚಟುವಟಿಕೆಯಲ್ಲಿ ತೊಡಗಿ

» ಚಿತ್ರದುರ್ಗ

ಯುವಜನರು ಎಲ್ಲ ಬಗೆಯ ದುಶ್ಚಟಗಳನ್ನು ತೊರೆದು, ಸೃಜನಶೀಲ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವಂತೆ ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ. ತಾಜ್‌ಪೀರ್ ಕರೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಯುವ ಕೇಂದ್ರ ಹಾಗೂ ಸರ್ಕಾರಿ ವಿಜ್ಞಾನ ಕಾಲೇಜು ವತಿಯಿಂದ ಶುಕ್ರವಾರ ನಗರದ ಸರ್ಕಾರಿ ವಿಜ್ಞಾನ ಕಾಲೇಜಿನಲ್ಲಿ ಜಿಲ್ಲಾ ಮಟ್ಟದ ಯುವಜನೋತ್ಸವ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಪ್ರಸ್ತುತ ದಿನಮಾನಗಳಲ್ಲಿ ಯುವಕರು ದುಶ್ಚಟಗಳಿಗೆ ಬಲಿಯಾಗುತ್ತಿದಾರೆ. ಇಂತಹ ದುಶ್ಚಟಗಳಿಂದ ಹೊರಬಂದು ಓದು, ಕ್ರೀಡೆ, ಕಲೆ, ಸಾಂಸ್ಕೃತಿಕ ಹೀಗೆ ಮುಂತಾದ ಕ್ಷೇತ್ರಗಳಲ್ಲಿ ತೊಡಗಿಸಿಕೊಳ್ಳಬೇಕು. ಸಿಗುವ ಅವಕಾಶಗಳನ್ನು ಬಳಸಿಕೊಂಡು ಭವಿಷ್ಯದಲ್ಲಿ ಉಜ್ವಲವಾಗಿ ಬೆಳೆಯಬೇಕು, ನಾಡಿಗೆ ಕೀರ್ತಿ ತರುವ ಕಾರ್ಯವನ್ನು ಯುವಜನರು ಮಾಡಬೇಕು ಎಂದರು.

ಉಪವಿಭಾಗಾಧಿಕಾರಿ ಎಂ.ಕಾರ್ತಿಕ್



ಮಾತನಾಡಿ, ಪ್ರಸ್ತುತ ಶಿಕ್ಷಣದ ಜೊತೆಗೆ ವಿವಿಧ ರೀತಿಯ ಕೌಶಲ್ಯಗಳು ಅಗತ್ಯ. ಕಥೆ, ಕವನ ಹಾಗೂ ಭಾಷಣ ಸ್ಪರ್ಧೆ, ಕವನ ಬರಹ, ಭಾಷಣ, ಚಿತ್ರಕಲೆ ಹವ್ಯಾಸಗಳನ್ನು ಬೆಳೆಸಿಕೊಳ್ಳಬೇಕು. ಶಿಕ್ಷಣದ ಜೊತೆಗೆ ಕಲೆ, ಕೌಶಲ್ಯಗಳನ್ನು ರೂಢಿಸಿಕೊಳ್ಳುವುದರಿಂದ ದೈಹಿಕ ಮತ್ತು ಮಾನಸಿಕವಾಗಿ ಸದೃಢವಾಗಿಸುತ್ತದೆ. ಹಾಗಾಗಿ ಯುವಜನತೆ ತಮಗೆ ಇಷ್ಟವಾದ ಕಲೆ, ಕೌಶಲ್ಯಗಳನ್ನು ಮತ್ತಷ್ಟು ವೃದ್ಧಿಸಿಕೊಂಡು ಸರಿಯಾದ ವೇದಿಕೆ ಸಿಕ್ಕಾಗ ಸದ್ಬಳಕೆ ಮಾಡಿಕೊಳ್ಳುವ ಮೂಲಕ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಬೆಳೆಯಬೇಕು ಎಂದು ಸಲಹೆ ನೀಡಿದರು.ನೆಹರು ಯುವ ಕೇಂದ್ರದ ಸಮನ್ವಯಾಧಿಕಾರಿ ಸುಹಾಸ್ ಮಾತನಾಡಿ, ದೇಶಕಂಡ ಸಂತಶ್ರೇಷ್ಠ ಸ್ವಾಮಿ ವಿವೇಕಾನಂದ ಅವರ ನೆನಪಿನಾರ್ಥವಾಗಿ ಪ್ರತಿ ವರ್ಷ ಜ.12 ರಿಂದ ಯುವಜನೋತ್ಸವ ಕಾರ್ಯಕ್ರಮ ಆಚರಿಸಲಾಗುತ್ತದೆ. ಈ ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಜಾನಪದ ಗೀತೆ, ನೃತ್ಯ, ಹಾಗೂ ಪಂಚಪ್ರಾಣ ಎಂಬ ವಿಷಯವನ್ನಾಧರಿಸಿ ಕಥೆ, ಕವನ ಹಾಗೂ ಭಾಷಣ ಸ್ಪರ್ಧೆ, ಕವನ ಬರಹ, ಭಾಷಣ, ಚಿತ್ರಕಲೆ, ವಿಜ್ಞಾನ ಮೇಳ, ಮೊಬೈಲ್ ಫೋಟೋಗ್ರಫಿ, ಉತ್ತಮ ಕರಕುಶಲ ವಸ್ತು ಪ್ರದರ್ಶನ, ಸಿದ್ದಉಡುಪು ಹಾಗೂ ಆಹಾರ ಸಂಸ್ಕರಣೆ ಸೇರಿದಂತೆ ಒಟ್ಟು 11 ಸ್ಪರ್ಧೆಗಳನ್ನುಆಯೋಜಿಸಲಾಗಿದೆ.ಇಂತಹ ಕಾರ್ಯಕ್ರಮಗಳು ಯುವಜನತೆಯಲ್ಲಿನ ಕಲೆ, ಸಾಂಸ್ಕೃತಿಕ ಕೌಶಲ್ಯಗಳನ್ನು ಹೊರಹಾಕಲು ಸೂಕ್ತ ವೇದಿಕೆಯಾಗಿವೆ. ಹಾಗಾಗಿ ಶಿಕ್ಷಣದಿಂದ ಅಷ್ಟೇ ಅಲ್ಲದೇ, ತಮಗೆ ಆಸಕ್ತಿ ಇರುವ ಕಲೆಗಳ ಮೂಲಕ ಜ್ಞಾನ, ವೃದ್ಧಿಸಿಕೊಂಡು ವೃತ್ತಿ ಬದುಕಾಗಿ ಸ್ವೀಕರಿಸಬಹುದು ಎಂದರು. ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ ಮಾತನಾಡಿ, ಯುವಕರು ಪ್ರಸ್ತುತ ದಿನಮಾನಗಳಲ್ಲಿ ಕಲೆ, ಕ್ರೀಡೆ, ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಆಸಕ್ತಿ ತೋರುತ್ತಿಲ್ಲ. ಏಕೆಂದರೆಪೋಷಕರುಕೇವಲಶೈಕ್ಷಣಿಕವಾಗಿ ಅಷ್ಟೇ ಒತ್ತು ನೀಡುತ್ತಿರುವುದು ಇದಕ್ಕೆ ಮುಖ್ಯ ಕಾರಣ. ಪ್ರತಿಯೊಬ್ಬರಲ್ಲಿಯೂ ಪ್ರತಿಭೆ, ಕಲೆ ಕೌಶಲ್ಯಗಳಿರುತ್ತವೆ. ಶಾಲಾ–ಕಾಲೇಜುಗಳಲ್ಲಿ ಅವುಗಳನ್ನು ಗುರುತಿಸಿ ಪೋಷಿಸಿ, ಪ್ರೋತ್ಸಾಹಿಸಬೇಕು ಎಂದರು.ಇದೇ ಸಂದರ್ಭದಲ್ಲಿ ಸ್ವಾಮಿ ವಿವೇಕಾನಂದ ರಾಜ್ಯ ಯುವ ಪ್ರಶಸ್ತಿ ಪುರಸ್ಕೃತರಾದ ಡಿ.ಶ್ರೀಕುಮಾರ್, ಪ್ರತಾಪ್ ಜೋಗಿ, ಸಿ.ಎನ್.ವೆಂಕಟೇಶ್, ಲಕ್ಷ್ಮೀ, ಹಿರಿಯೂರು ಚಿತ್ತಪ್ಪ ಅವರನ್ನು ಸನ್ಮಾನಿಸಲಾಯಿತು. ಸರ್ಕಾರಿ ವಿಜ್ಞಾನ ಕಾಲೇಜು ಉಪನ್ಯಾಸಕ ನಾಗರಾಜ್ ಸ್ವಾಗತಿಸಿದರು.ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಅಂತ್ಯೋದಯ ಕಲ್ಚರಲ್ ಫೌಂಡೇಷನ್ ಅಧ್ಯಕ್ಷ ಡಿ.ಓ.ಮುರಾರ್ಜಿ ಸರ್ಕಾರಿ ವಿಜ್ಞಾನ ಕಾಲೇಜಿನ ಬೋದಕ ಮತ್ತು ಬೋದಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಫಾಸ್ಟ್ ನ್ಯೂಸ್

## ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ



» **ಚಿತ್ರದುರ್ಗ**

ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ 68 ನೇ ಪರಿನಿಬ್ಬಾಣ ದಿನದ ಪ್ರಯುಕ್ತ ಕರ್ನಾಟಕ ದಲಿತ ಸಂಘರ್ಷ ಸಮಿತಿ ದಾದಾ ಸಾಹೇಬ್

ಡಾ.ಎನ್.ಮೂರ್ತಿ ಸ್ಥಾಪಿತ ಬಣದಿಂದ ಶುಕ್ರವಾರ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಸಲ್ಲಿಸಲಾಯಿತು.ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾಧ್ಯಕ್ಷ ಸಿ.ಹೆಚ್.ಮಂಜುನಾಥ್ ಮಾತನಾಡಿ ಮಹಾ ಮಾನವತಾವಾದಿ, ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್‌ರವರ ಸಂವಿಧಾನದಿಂದ ದೇಶದಲ್ಲಿ ಎಲ್ಲಾ ಜಾತಿ ಧರ್ಮದವರು ಸಮಾನವಾಗಿ ಬದುಕುತ್ತಿದ್ದಾರೆ. ಶಿಕ್ಷಣ, ಸಂಘಟನೆ, ಹೋರಾಟದಿಂದ ಮಾತ್ರ ದಲಿತರು ಸ್ವಾವಲಂಭಿಗಳಾಗಬೇಕೆಬಹುದೆಂಬ ಕನಸು ಕಂಡಿದ್ದ ಅಂಬೇಡ್ಕರ್‌ರವರ ಆಶಯಗಳು ಈಡೇರಬೇಕಾದರೆ ದಲಿತರು ಶಿಕ್ಷಣವಂತರಾಗಬೇಕೆಂದು ಹೇಳಿದರು.

ದಲಿತ ಮುಖಂಡರುಗಳಾದ ಡಿ.ಶಿವಣ್ಣ, ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾ ಉಪಾಧ್ಯಕ್ಷ ರಂಗಸ್ವಾಮಿ, ಟಿ.ಹೆಚ್.ಶಿವಣ್ಣ, ನೇಹ ಮಲ್ಲೇಶ್, ಡಿ.ಜಯಪ್ಪ, ಹೆಚ್.ಭೀಮಪ್ಪ, ಚನ್ನಿಗರಾಮಯ್ಯ, ಬಿ.ಟಿ.ಚಿದಾನಂದಮೂರ್ತಿ, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಸಂಪತ್‌ಕುಮಾರ್, ಹರೀಶ್, ಹನುಮಂತಪ್ಪ, ಬೆನಕರಾಜು, ಕೃಷ್ಣಪ್ಪ ಪರಮೇಶ್ವರಪ್ಪ ಬೆನಕನಹಳ್ಳಿ, ವೆಂಕಟೇಶ್ ಸಿಂಗಾಪುರ ಹಾಗೂ ಸಮಿತಿಯ ಪದಾಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಬೇಡಿಕೆ ಈಡೇರಿಕೆಗಾಗಿ ಡಿ.೨ರಿಂದ ರೈತರಿಂದ ಬೆಳಗಾವಿ ಸುವರ್ಣಸೌಧ ಮುತ್ತಿಗೆ: ಲಕ್ಷ್ಮಿಕಾಂತ



» **ಚಿತ್ರದುರ್ಗ**

ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ವಾಸುದೇವ ಮೇಟಿ ಬಣದಿಂದ ಡಿ.9 ರಂದು ಬೆಳಗಾವಿ ಸುವರ್ಣ ಸೌಧಕ್ಕೆ ಮುತ್ತಿಗೆ ಹಾಕಲಾಗುವುದೆಂದು ಜಿಲ್ಲಾಧ್ಯಕ್ಷ ಈ.ಎನ್.ಲಕ್ಷ್ಮಿಕಾಂತ ತಿಳಿಸಿದರು.ಪತ್ರಕರ್ತರ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ರೈತರಿಗೆ ಮಾರಕವಾಗಿರುವ ಮೂರು ಕೃಷಿ ಕಾಯಿದೆಗಳನ್ನು ರಾಜ್ಯ ಸರ್ಕಾರಕ್ಕೆ ಹಿಂದಕ್ಕೆ ಪಡೆಯಬೇಕು. ರೈತರ ಬೆಳೆಗಳಿಗೆ ವೈಜ್ಞಾನಿಕ ಬೆಲೆ ನೀಡಬೇಕು.ಕೃಷಿಗಾಗಿ ರೈತರು ಬ್ಯಾಂಕ್‌ಗಳಲ್ಲಿ ಪಡೆದಿರುವ ಸಾಲ ಮನ್ನಾ ಆಗಬೇಕು. ಗೋಮಾಳ, ಅರಣ್ಯಭೂಮಿ, ಬಗರ್‌ಹುಕುಂ, ಹುಲ್ಲುಬನ್ನಿ ಖರಾಬು, ಸೇಂಧಿವನ ಸಾಗುವಳಿ ಮಾಡುತ್ತಿರುವ ರೈತರಿಗೆ ಹಕ್ಕುಪತ್ರಗಳನ್ನು ವಿತರಿಸಬೇಕು ಎಂದರು. ಭದ್ರಾಮೇಲ್ದಂಡೆ ಕಾಮಗಾರಿಯನ್ನು ಶೀಘ್ರವೇ ಪೂರ್ಣಗೊಳಿಸಿ ಜಿಲ್ಲೆಗೆ ನೀರು ಹರಿಸಬೇಕು. ಅಕ್ರಮ-ಸಕ್ರಮ ಅಡಿಯಲ್ಲಿ ಮೊದಲಿನಂತೆ ರೈತರಿಗೆ ವಿದ್ಯುತ್ ಪರಿಕರಗಳನ್ನು ನೀಡಬೇಕು. ಅತಿವೃಷ್ಟಿಯಿಂದ ಬೆಳೆ ಹಾನಿಗೊಳಗಾಗಿರುವ ಎಲ್ಲಾ ರೈತರಿಗೆ ಪರಿಹಾರ ಕೊಡಬೇಕೆಂದು ಒತ್ತಾಯಿಸಿ ಬೆಳಗಾವಿಯಲ್ಲಿ ನಡೆಯುವ ಚಳಿಗಾಲದ ಅಧಿವೇಶನಕ್ಕೆ ಮುತ್ತಿಗೆ ಹಾಕಲಾಗುವುದುಒಂದು ವೇಳೆ ನಮ್ಮ ಬೇಡಿಕೆಗಳು ಈಡೇರದಿದ್ದರೆ ಸಚಿವರು, ಶಾಸಕರುಗಳಿಗೆ ಘೇರಾವ್ ಹಾಕಲಾಗುವುದೆಂದು ಈ.ಎನ್.ಲಕ್ಷ್ಮಿಕಾಂತ ಎಚ್ಚರಿಸಿದರು. ಹೆಚ್.ಶಿವಮೂರ್ತಿ, ಲೋಲಾಕ್ಷಮ್ಮ, ನಾಗರಾಜ್ ಕೆರೆಯಾಗಳಹಳ್ಳಿ, ಶ್ರೀನಿವಾಸ್ ಚಿಕ್ಕೇನಹಳ್ಳಿ, ಮಂಜುಳ, ರಂಗಸ್ವಾಮಿ, ಜಯಲಕ್ಷ್ಮಿ, ಸೈಯದ್ ಮಮ್ತಾಜ್, ಶಶಿಕಲ, ಲಲಿತಮ್ಮ ಇವರುಗಳು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

## ವಿದ್ಯಾಭ್ಯಾಸಕ್ಕಾಗಿ ಲ್ಯಾಪ್‌ಟಾಪ್ ವಿತರಣೆ

» **ದಾವಣಗೆರೆ**

ಪ್ರಸಕ್ತ ಸಾಲಿನಲ್ಲಿ ಮ್ಯಾನ್ಯೂಯಲ್ ಸ್ಕ್ಯಾವೆಂಜರ್ಸ್, ಸಫಾಯಿ ಕರ್ಮಚಾರಿ ಕುಟುಂಬದ ಮಕ್ಕಳಿಗೆ ವಿದ್ಯಾಭ್ಯಾಸಕ್ಕಾಗಿ ಲ್ಯಾಪ್‌ಟಾಪ್ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಮ್ಯಾನ್ಯೂಯಲ್ ಸ್ಕ್ಯಾವೆಂಜರ್ಸ್ ಮಕ್ಕಳಿಗೆ 3 ಹಾಗೂ ಸಫಾಯಿ ಕರ್ಮಚಾರಿ ಮಕ್ಕಳಿಗೆ 2 ಲ್ಯಾಪ್‌ಟಾಪ್ ವಿತರಿಸಲು ಅವಕಾಶವಿರುತ್ತದೆ. ಬಿ.ಕಾಂ, ಬಿ.ಎಸ್ಸಿ, ಎಂ.ಕಾಂ, ಎಂ.ಎಸ್ಸಿ, ಬಿ.ಇ, ಎಂ.ಟೆಕ್ ವಿದ್ಯಾಭ್ಯಾಸ ಮಾಡುತ್ತಿರಬೇಕು. ಅರ್ಜಿದಾರರು ಜಿಲ್ಲಾ ವ್ಯವಸ್ಥಾಪಕರು, ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ನಂ.337/16ಎ-16, ಗಣೇಶ್ ಲೇಔಟ್ 1ನೇಕ್ರಾಸ್ ಪಿ.ಬಿ.ರಸ್ತೆ ದಾವಣಗೆರೆಯಲ್ಲಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಕಚೇರಿಗೆ ಸಲ್ಲಿಸಬೇಕು ಎಂದು ನಿಗಮದ ವ್ಯವಸ್ಥಾಪಕರು ತಿಳಿಸಿದ್ದಾರೆ.

# ತಾರತ್ಯಮದ ವಿರುದ್ಧ ಧ್ವನಿ ಎತ್ತಿ: ಲೂಸಿಯಾ

» **ಚಿತ್ರದುರ್ಗ**

ದೌರ್ಜನ್ಯ ಮುಕ್ತ ಸಮಾಜ ನಿರ್ಮಾಣವಾಗಬೇಕಾದರೆ ಗಂಡು ಹೆಣ್ಣು ಎಂಬ ತಾರತಮ್ಯದ ವಿರುದ್ಧ ಧ್ವನಿ ಎತ್ತಬೇಕು ಎಂದು ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಸಂವರ್ಧನ ಘಟಕ ಸಂಯೋಜಕಿ ಲೂಸಿಯಾ ಹೇಳಿದರು.

ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಸಂವರ್ಧನ ಘಟಕ, ಜಿಲ್ಲಾ ಪಂಚಾಯತ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಸಹಯೋಗದಲ್ಲಿ ಹಿರಿಯೂರು ತಾಲೂಕಿನ ಆದಿವಾಲ ಗ್ರಾಮದ ಸಮುದಾಯ ಭವನದಲ್ಲಿ, ಗುರುವಾರ ಹಮ್ಮಿಕೊಳ್ಳಲಾದ ಲಿಂಗತ್ವ ಆಧಾರಿತ ದೌರ್ಜನ್ಯ ತಡೆ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಹೆಣ್ಣು ಕಡಿಮೆ ಗಂಡು ಹೆಚ್ಚು ಎಂಬ ಭಾವನೆ ಕುಟುಂಬದಿಂದಲೇ ಪ್ರಾರಂಭವಾಗುತ್ತದೆ. ಆದ್ದರಿಂದ ಕುಟುಂಬದಲ್ಲಿನ ತಾರತಮ್ಯವನ್ನು ಮೊದಲು ತಡೆಯಬೇಕು. ಮಹಿಳೆಯರ ಮೇಲೆ ಎಲ್ಲಡೆಯೂ ದೌರ್ಜನ್ಯಗಳು ಆಗುತ್ತಿರುವುದು ಕಂಡುಬರುತ್ತಿದೆ. ಇದನ್ನು ತಡೆಯಲು ಹೆಣ್ಣು ಮಕ್ಕಳು ಶಕ್ತರಾಗಬೇಕು. ವಿದ್ಯೆ, ಉದ್ಯೋಗದಲ್ಲಿ ಪ್ರಗತಿ ಹೊಂದಬೇಕು. ಆರ್ಥಿಕ ಸ್ವಾಲಂಭಿತನ, ಕಾನೂನುಗಳ ಅರಿವು ಇದ್ದಾಗ ಇಂತಹ ದೌರ್ಜನ್ಯಗಳನ್ನು ತಡೆದು, ಅವುಗಳ



ವಿರುದ್ಧ ಧ್ವನಿ ಎತ್ತಿ ಗೆಲ್ಲಬಹುದಾಗಿದೆ ಎಂದು ಲೂಸಿಯಾ ಅಭಿಪ್ರಾಯಪಟ್ಟರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್ ಮಾತನಾಡಿ, ಮಗು ತಾಯಿಯ ಗರ್ಭದಲ್ಲಿರುವಾಗಲೇ ಸ್ಕ್ಯಾನಿಂಗ್ ಮೂಲಕ ಲಿಂಗ ಪತ್ತೆ ಮಾಡಿ, ಹೆಣ್ಣು ಎಂದು ತಿಳಿದು ಬಂದರೆ ಗರ್ಭಪಾತ ಮಾಡಿಸುವ ಅನಿಷ್ಠ ಪದ್ಧತಿ ಸಮಾಜದಲ್ಲಿದೆ. ಪೋಷಕರು ಪ್ರೌಢಶಾಲೆಯ ಹಂತದ ಹೆಣ್ಣು ಮಕ್ಕಳಿಗೆ ಬೇಗ ಮದುವೆ ಮಾಡುತ್ತಾರೆ. ಇದರಿಂದ ಹೆಣ್ಣು ಮಕ್ಕಳ ಮೇಲೆ ದೈಹಿಕ ಮಾನಸಿಕ ದುಷ್ಪರಿಣಾಮ ಉಂಟಾಗುತ್ತದೆ. ಆದ್ದರಿಂದ ಹೆಣ್ಣು ಭ್ರೂಣ ಹತ್ಯೆ ಹಾಗೂ ಬಾಲ್ಯ ವಿವಾಹ ಪಿಡುಗಾಗಿ ಪರಿಣಮಿಸಿದೆ. ಇವುಗಳು ಕಾನೂನು ರೀತಿಯಾಗಿ ಘೋರ ಅಪರಾಧಗಳಾಗಿವೆ. ಪೋಷಕರು 18 ವರ್ಷ ಪೂರ್ಣಗೊಳ್ಳುವವರೆಗೂ ಯಾವ ಹೆಣ್ಣು ಮಕ್ಕಳಿಗೂ ಮದುವೆ ಎಂಬ ಸರಪಳಿಯಲ್ಲಿ ಬಂಧಿಸಬಾರದು. ಎಲ್ಲಾ ಮಕ್ಕಳಿಗೆ ಸಮಾನ ವಿದ್ಯಾಭ್ಯಾಸ ನೀಡಿದರೆ ಮಾತ್ರ ಉತ್ತಮ ಹಾಗೂ ದೌರ್ಜನ್ಯ ಮುಕ್ತ ಸಮಾಜ ನಿರ್ಮಿಸಲು ಸಾಧ್ಯ ಎಂದರು.

ಸಂಕಷ್ಟದಲ್ಲಿರುವ ಹೆಣ್ಣುಮಕ್ಕಳ ರಕ್ಷಣೆಗಾಗಿ ಮಹಿಳೆ ಮತ್ತು ಮಕ್ಕಳಿಗೆ ಇಲಾಖೆ ಶ್ರಮಿಸುತ್ತಿದೆ. ಸಾಂತ್ವನ, ಸಖಿ ಒನ್ ಸ್ಟಾಫ್ ಸೆಂಟರ್‌ನಲ್ಲಿ ನೊಂದ ಮಹಿಳೆಯರಿಗೆ ಒಂದೇ ಸೂರಿನಡಿ ಅನೇಕ ನೆರವು ಒದಗಿಸಲಾಗುತ್ತಿದೆ. ನೊಂದವರು ಮಕ್ಕಳ ಸಹಾಯ ವಾಣಿ ಸಂಖ್ಯೆ 1098, ಮಹಿಳಾ ಸಹಾಯವಾಣಿ ಸಂಖ್ಯೆ 181, ಪೊಲೀಸ್ ಸಹಾಯವಾಣಿ ಸಂಖ್ಯೆ 112 ಕರೆ ಮಾಡುವಂತೆ ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿ ಪವಿತ್ರ.ಎನ್ ಮಾತನಾಡಿ, ಜಿಲ್ಲೆಯಾದ್ಯಂತ ನವೆಂಬರ್-25 ರಿಂದ ಡಿಸೆಂಬರ್-23 ವರೆಗೆ ಲಿಂಗತ್ವ ಆಧಾರಿತ ದೌರ್ಜನ್ಯ ತಡೆ ಅಭಿಯಾನ ನಡೆಸಲಾಗುತ್ತಿದೆ. ಎಲ್ಲರೂ ಹೆಣ್ಣು ಮಕ್ಕಳ ಹಕ್ಕುಗಳ ಉಲಂಘನೆಯಾಗದಂತೆ ತಡೆಯಲು ಪ್ರತಿಜ್ಞೆ ಮಾಡಬೇಕು ಎಂದರು.

ಗ್ರಾಮೀಣಾಭಿವೃದ್ಧಿ ಮಂತ್ರಾಲಯ ನವದೆಹಲಿಯಿಂದ ಆಗಮಿಸಿದ ಸುಪರ್ಣ ಮಾತನಾಡಿ, ದೌರ್ಜನ್ಯ ವಿರುದ್ದ ಎಲ್ಲ ವರ್ಗದ ಮಹಿಳೆಯರು ಕಾನೂನಿನ ನೆರವು ಪಡೆಯಬೇಕು ಎಂದು ತಿಳಿಸಿದರು. ನಂತರ ಆದಿವಾಲ-3ನೇ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿದರು. ಪಟ್ರೆಹಳ್ಳಿ ಗ್ರಾಮಕ್ಕೆ ಭೇಟಿ ನೀಡಿ ಲಿಂಗತ್ವ ಆಧಾರಿತ ರಂಗೋಲಿಗಳನ್ನು ವೀಕ್ಷಿಸಿ ನಂತರ, ಹಿರಿಯೂರಿನ ಸಿಡಿಪಿಓ ಕಛೇರಿಗೆ ಭೇಟಿ ನೀಡಿ ಮೇಲ್ವಿಚಾರಕಾರೊಂದಿಗೆ ಸಭೆ ನಡೆಸಿದರು. ಮಹಿಳಾ ಸಾಂತ್ವನ ಕೇಂದ್ರಕ್ಕೆ ಭೇಟಿ ನೀಡಿ ಕಾರ್ಯಚಟುವಟಿಕೆಗಳ ಬಗ್ಗೆ ಮಾಹಿತಿ ಪಡೆದರು

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿಗಳು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯದ ಜಿಲ್ಲಾ ಮತ್ತು ತಾಲ್ಲೂಕು ಅಧಿಕಾರಿಗಳು ಒಕ್ಕೂಟದ ಅಧ್ಯಕ್ಷರು ಮತ್ತು ಸದಸ್ಯರು ಅಂಗನವಾಡಿಯ ಮೇಲ್ವಿಚಾರಕಿಯರು ಹಾಗೂ ಕಾರ್ಯಕರ್ತೆಯರು ಸ್ಥಳೀಯ ಸಂಘ ಸಂಸ್ಥೆಗಳ ಮಹಿಳೆಯರು ಉಪಸ್ಥಿತರಿದ್ದರು.

# ರಾಜಕೀಯವಾಗಿ ದಲಿತರು ಬಲಗೊಳ್ಳಬೇಕು

» **ಚಿತ್ರದುರ್ಗ**

ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್‌ರವರ ಆಶಯದಂತೆ ಶಿಕ್ಷಣ,ಸಂಘಟನೆ,ಹೋರಾಟದಿಂದ ಮಾತ್ರ ಜೀವನದಲ್ಲಿ ಬದಲಾವಣೆ ಕಂಡುಕೊಳ್ಳಲು ಸಾಧ್ಯ ಎಂದು ಜೆ.ಜೆ.ಹಟ್ಟಿಯ ಡಾ.ಬಿ.ತಿಪ್ಪೇಸ್ವಾಮಿ ಹೇಳಿದರು.

ಕರ್ನಾಟಕ ರಾಜ್ಯ ಮಾದಿಗ ಯುವಸೇನೆ, ಕರ್ನಾಟಕ ದಲಿತ ಸಂಘರ್ಷ ಸಮಿತಿ, ಕಣಿವೆಮಾರಮ್ಮ ಸಂಘ, ಸ್ಲಂ ಜನಾಂದೋಲನ-ಕರ್ನಾಟಕ ಇವುಗಳ ಸಂಯುಕ್ತಾಶ್ರಯದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಪರಿನಿಬ್ಬಾಣದ ಅಂಗವಾಗಿ ಪತ್ರಕರ್ತರ ಭವನದಲ್ಲಿ ಶುಕ್ರವಾರ ಏರ್ಪಡಿಸಲಾಗಿದ್ದ ವಿಚಾರಗೋಷ್ಠಿ ಉದ್ಘಾಟಿಸಿ ಮಾತನಾಡಿದರು.

ಚಿಕ್ಕಂದಿನಲ್ಲಿಯೇ ಸಾಕಷ್ಟು ಕಷ್ಟಗಳನ್ನು ಅನುಭವಿಸಿದ ಅಂಬೇಡ್ಕರ್ ಎಲ್ಲಾ ಜಾತಿ ಧರ್ಮದವರಿಗೂ ಸಂವಿಧಾನದಲ್ಲಿ ಸಮಾನತೆ ನೀಡಿದ್ದಾರೆ. ಪ್ರಜಾಪ್ರಭುತ್ವದಡಿ ಮತದಾನದ ಹಕ್ಕು ಎಲ್ಲರಿಗೂ ಸಿಕ್ಕಿದೆ ಎಂದರೆ ಅದಕ್ಕೆ ಅಂಬೇಡ್ಕರ್ ಕೊಟ್ಟಿರುವ ಕೊಡುಗೆ ಎಂದರು.

ಚುನಾವಣೆಯಲ್ಲಿ ಕೇವಲ ಹಣ ಹೆಂಡಕ್ಕೆ ಅಮೂಲ್ಯವಾದ ಮತಗಳನ್ನು ಮಾರಿಕೊಳ್ಳಬೇಡಿ. ಯೋಗ್ಯರಿಗೆ ಮತ ನೀಡಿ. ಒಂದು ಕಾಲದಲ್ಲಿ ದಲಿತರಿಗೆ ಶಕ್ತಿಯಿತ್ತು. ಗುಡುಗಿದರೆ ವಿಧಾನಸೌಧ ನಡುಗುತ್ತಿತ್ತು. ಈಗ ದಲಿತರಲ್ಲಿ ಒಗ್ಗಟ್ಟಿಲ್ಲದಂತಾಗಿದೆ. ಒಬ್ಬರು ಬೆಳೆದರೆಮತ್ತೊಬ್ಬರುಸಹಿಸುವುದಿಲ್ಲ. ಶೈಕ್ಷಣಿಕ, ರಾಜಕೀಯವಾಗಿ ದಲಿತರು ಬಲಗೊಳ್ಳಬೇಕು ಎಂದು ಕರೆ ನೀಡಿದರು.

ದಲಿತರ ಮೇಲೆ ಎಲ್ಲಿಯಾದರೂ ದೌರ್ಜನ್ಯ, ದಬ್ಬಾಳಿಕೆಯಾದರೆ



ದಲಿತರು ಹೋರಾಟಕ್ಕೆ ಇಳಿಯಬೇಕು. ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದವರು ಬಹುಸಂಖ್ಯಾತರಿದ್ದರು. ಕಡಿಮೆ ಸಂಖ್ಯೆಯಲ್ಲಿರುವವರಿಗೆ ಅಧಿಕಾರ ಕೊಟ್ಟು ಕೈಕಟ್ಟಿಕೊಂಡು ನಿಲ್ಲುವಂತಾಗಿದೆ. ಮಲಗಿರುವ ದಲಿತರನ್ನು ಎಚ್ಚರಿಸಬೇಕಿದೆ. ಡಾ.ಬಿ.ಆರ್. ಅಂಬೇಡ್ಕರ್‌ರವರ ಆಚಾರ-ವಿಚಾರ ತತ್ವ ಸಿದ್ಧಾಂತಗಳನ್ನು ಮೈಗೂಡಿಸಿಕೊಳ್ಳುವಂತೆ ದಲಿತರಲ್ಲಿ ಡಾ.ಬಿ.ತಿಪ್ಪೇಸ್ವಾಮಿ ಮನವಿ ಮಾಡಿದರು.

ಧಮನಿತರ ಪರವಾಗಿ ಹೋರಾಡಿದ ಡಾ.ಬಿ.ಆರ್. ಅಂಬೇಡ್ಕರ್‌ರವರ ಆಶಯಗಳು ಈಡೇರಬೇಕಾದರೆ ಮೊದಲು ದಲಿತರ ಕೈಗೆ ಅಧಿಕಾರ ಸಿಗಬೇಕು. ದಲಿತರಲ್ಲಿ ಒಗ್ಗಟ್ಟಿನ ಕೊರತೆಯಿರುವುದರಿಂದ ಪ್ರತಿ ಚುನಾವಣೆಯಲ್ಲಿಯೂ ಚಿತ್ರದುರ್ಗ ಕ್ಷೇತ್ರದಲ್ಲಿ ಹೊರಗಿನವರು ಬಂದು ಗೆಲ್ಲುತ್ತಿದ್ದಾರೆಂದು ಬೇಸರ ವ್ಯಕ್ತಪಡಿಸಿದರು.

ಮಾದಿಗ ಮಹಾಸಭಾ ಜಿಲ್ಲಾಧ್ಯಕ್ಷ, ಚಳ್ಳಕೆರೆ ನಗರಸಭೆ ಮಾಜಿ ಅಧ್ಯಕ್ಷ ಎಂ.ಶಿವಮೂರ್ತಿ ಮಾತನಾಡಿ ಡಾ.ಬಿ.ಆರ್.ಅಂಬೇಡ್ಕರ್ ಚಿಕ್ಕಂದಿನಲ್ಲಿಯೇ ಸಾಕಷ್ಟು ಕಷ್ಟ-ನೋವು, ಹಿಂಸೆ, ಅವಮಾನ ಅನುಭವಿಸಿ ದೇಶಕ್ಕೆ ಬಲಿಷ್ಠವಾದ ಸಂವಿಧಾನವನ್ನುನೀಡಿದ್ದಾರೆ.ಅವರ ಆದರ್ಶ, ತತ್ವ ಸಿದ್ಧಾಂತಗಳನ್ನು ಪ್ರತಿಯೊಬ್ಬರು ಪಾಲಿಸಿ ಅವರ ನೆರಳಿನಲ್ಲಿ ಬದುಕಬೇಕು. 36 ಪದವಿಗಳನ್ನು ಪಡೆದಿರುವ ಅಂಬೇಡ್ಕರ್‌ರವರ ಸಂವಿಧಾನವನ್ನು ಎಲ್ಲರೂ ಓದಬೇಕು. ಎಲ್ಲಾ ಜಾತಿ ವರ್ಗದವರು ಇಂದು ಸಮಾನವಾಗಿ ಬದುಕುತ್ತಿದ್ದಾರೆಂದು ಅಂಬೇಡ್ಕರ್ ಕಾರಣ ಎಂದು ಸ್ಮರಿಸಿದರು.

ದಲಿತ ಮುಖಂಡ ಬಿ.ರಾಜಣ್ಣ ಮಾತನಾಡುತ್ತ ಅಂಬೇಡ್ಕರ್‌ರವರು ದೇಶಕ್ಕೆ ಕೊಡುಗೆಯಾಗಿ ಕೊಟ್ಟಿರುವ ಸಂವಿಧಾನದಿಂದ ದಲಿತರು ತಲೆ ಎತ್ತಿಕೊಂಡು ಓಡಾಡುವಂತಾಗಿದೆ.

ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಕೇವಲ ದಲಿತರಿಗಷ್ಟೆ ಸಂವಿಧಾನ ನೀಡಿಲ್ಲ. ಭಾರತದ ಪ್ರತಿಯೊಬ್ಬ ಪ್ರಜೆಯೂ ಸ್ವಾಭಿಮಾನಿಯಾಗಿ ಬದುಕುವ ಶಕ್ತಿ ಕೊಟ್ಟಿದೆ ಎಂದು ನುಡಿದರು.

ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಮಹಾಂತೇಶ್ ಮಾತನಾಡಿ ದೇಶಕ್ಕೆ ಸ್ವಾತಂತ್ರ್ಯ ಸಿಕ್ಕು ಎಪ್ಪತ್ತು ವರ್ಷಗಳಾಗಿದ್ದರೂ ಅಸ್ಪೃಶ್ಯತೆ ಇನ್ನು ನಿಂತಿಲ್ಲ. ದಲಿತರ ಮೇಲೆ ನಿರಂತರವಾಗಿ ದೌರ್ಜನ್ಯ, ಬಹಿಷ್ಕಾರಗಳು ನಡೆಯುತ್ತಿದೆ. ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ ವಿಚಾರಗಳನ್ನು ತಿಳಿದುಕೊಂಡು ಶಿಕ್ಷಣವಂತರಾದಾಗ ಮಾತ್ರ ಜೀವನದಲ್ಲಿ ಬದಲಾವಣೆ ಕಂಡುಕೊಳ್ಳಬಹುದು. ಸುಪ್ರೀಂಕೋರ್ಟ್ ಆದೇಶದಂತೆರಾಜ್ಯದಮುಖ್ಯಮಂತ್ರಿ ಸಿದ್ದರಾಮಯ್ಯನವರು ಒಳ ಮೀಸಲಾತಿ ಜಾರಿಗೊಳಿಸದಿದ್ದರೆ ರಾಜ್ಯಾದ್ಯಂತ ಹೋರಾಟ ಮಾಡಬೇಕಾಗುತ್ತದೆಂದು ಎಚ್ಚರಿಸಿದರು.

ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಸಂಪತ್‌ಕುಮಾರ್, ಲಿಡ್ಕರ್ ಮಾಜಿ ಚೇರ್ಮನ್ ಓ.ಶಂಕರ್,ಕಣಿವೆಮಾರಮ್ಮಸಂಘದ ಅಧ್ಯಕ್ಷ ತಿಪ್ಪೇಸ್ವಾಮಿ, ಮಲ್ಲಣ್ಣ,ಸ್ಲಂ ಜನಾಂದೋಲನದ ಮಂಜಣ್ಣ, ಕೆ.ರಾಜಣ್ಣ ವೇದಿಕೆಯಲ್ಲಿದ್ದರು.

ಕನ್ನಡ ವಿಕಾಸ ರತ್ನ ಪ್ರಶಸ್ತಿ ಪುರಸ್ಕೃತ ಜಾನಪದ ಜಾಗೃತಿ ಪರಿಷತ್‌ಅಧ್ಯಕ್ಷಹೆಚ್.ಪ್ಯಾರಿಜಾನ್‌ಗೆ ಅಂಬೇಡ್ಕರ್ ಪ್ರಶಸ್ತಿ ಪತ್ರ ನೀಡಿ ಸನ್ಮಾನಿಸಲಾಯಿತು.

## ಶಾಸಕ ಚಂದ್ರಪ್ಪ ಮೇಲೆ ಮಾಡಿದ ಆರೋಪ ಸುಳ್ಳು: ಸಿದ್ದೇಶ್

» **ಮೊದಲ ಪುಟದಿಂದ**

ಇವರು ಮೂಲತ ಬಿಜೆಪಿಯವರು ಎನ್ನುತ್ತಿದ್ದಾರೆ ಆದರೆ ಒಂದು ದಿನವೂ ಸಹಾ ಪಕ್ಷದ ಕಚೇರಿಗೆ ಬಂದಿಲ್ಲ ಸಭೆಯಲ್ಲಿ ಭಾಗವಹಿಸಿಲ್ಲ, ಪಕ್ಷದ ಪರವಾಗಿ ಪ್ರಚಾರವನ್ನು ಮಾಡಿಲ್ಲ, ಇಂತಹ ವ್ಯಕ್ತಿ ಒಬ್ಬ ಶಾಸಕರ ಮೇಲೆ ಆರೋಪ ಮಾಡಿರುವುದು ಸರಿಯಲ್ಲ ಶಾಸಕರು ಅಕ್ರಮ ಭ್ರಷ್ಟಚಾರ ಮಾಡಿದ್ದರೆ ಸರಿಯಾದ ರೀತಿಯಲ್ಲಿ ದಾಖಲೆಯನ್ನು ನೀಡಲಿ ಬರೀ ಮಾತನಾಡುವುದು ಸರಿಯಲ್ಲ ಎಂದು ತಿಳಿಸಿದರು.

ಜಯಸಿಂಹ ಮತ್ತು ಅವರ ತಂಡ ನಾವು ಮೂಲತ ಬಿಜೆಪಿಯವರು ಎನ್ನುತ್ತಿದ್ದಾರೆ ಆದರೆ ಮೊನ್ನೆ ನಡೆದ ಪಂ.ಪಂ.ಅಧ್ಯಕ್ಷ ಉಪಾಧ್ಯಕ್ಷರ ಚುನಾವಣೆಯ ನಂತರ ಕಾಂಗ್ರೆಸ್ ಮುಖಂಡರು ಮಾಜಿ ಸಚಿವರಾದ ಅಂಜನೇಯರವರ ಬಳಿ ಹೋಗಿ ಕಾಂಗ್ರೆಸ್ ಶಾಲು ಹಾಕಿ ನಾವು ನಿಮ್ಮ ಪಕ್ಷದವರು ಎಂದಿದ್ದಾರೆ ತದ ನಂತರ ಸಂಸದರಾದ ಗೋವಿಂದ ಕಾರಜೋಳ ರವರ ಬಳಿ ಹೋಗಿ ಬಿಜೆಪಿ ಶಾಲು ಹಾಕಿ ನಾವು ನಿಮ್ಮ ಪಕ್ಷವನ್ನು ಸೇರುತ್ತೇವೆ ಎಂದಿದಾರೆ, ಈ ರೀತಿಯಾದ ಗೊಂದಲವನ್ನು ಸೃಷ್ಟಿ ಮಾಡಿದ್ದಾರೆ ಇದಕ್ಕೆ ತಕ್ಕ ಸಾಕ್ಷಿ ನಮ್ಮ ಬಳಿ ಇದೆ ಎಂದು ಸಿದ್ದೇಶ್ ಹೇಳಿದ್ದಾರೆ.ನಮ್ಮಲ್ಲಿ ಇರುವ ಕಾರ್ಯಕರ್ತರು ಗಟ್ಟಿಯಾಗಿದ್ದಾರೆ, ಅವರೆಲ್ಲ ಜೊಳ್ಳು ಕಾಳುಗಳಾಗಿದ್ದಾರೆ. ಪಕ್ಷ ಯಾರಿಗೆ ಟೀಕೇಟ್ ನೀಡುತ್ತದ್ದೇಯೆ ಆವರ ಪರವಾಗಿ ಚುನಾವಣೆಯಲ್ಲಿ ಪ್ರಚಾರ ಮಾಡಬೇಕು ಆದರೆ ಇವರು ಬೇರೆ ಅಭ್ಯರ್ಥಿಯನ್ನು ಹುಟ್ಟು ಹಾಕಿ ಚುನಾವಣೆಯಲ್ಲಿ ನಿಲ್ಲಿಸಿ ಅವರು ಸೋಲುವಂತೆ ಮಾಡಿದ್ದಾರೆ ಇದು ಪಕ್ಷ ವಿರೋಧಿ ಚಟುವಟಿಕೆಯಾಗಿದೆ, ಚಂದ್ರಪ್ಪ ರವರು ಹೊಳಲ್ಕೆರೆ ಕ್ಷೇತ್ರದ ಶಾಸಕರಾದ ಮೇಲೆ ವಿವಿಧ ರೀತಿಯ ಅಭೀವೃದ್ದಿ ಕಾರ್ಯವನ್ನು ಮಾಡಿದ್ದಾರೆ, ಚಕ್ ಡ್ಯಾಂಗಳಿಗೆ ಕೆರೆಗಳಿಗೆ ನೀರನ್ನು ತುಂಬಿಸಿದ್ದಾರೆ, ವಿವಿಧ ರೀತಿಯ ಕಟ್ಟಡಗಳನ್ನು ನಿರ್ಮಾಣ ಮಾಡಿದ್ದಾರೆ. ಇದೆಲ್ಲಾ ಅಭೀವೃದ್ದಿ ಅಲ್ಲವಾ ಎಂದು ಪ್ರಶ್ನಿಸಿದ ಸಿದ್ದೇಶ್, ಚಂದ್ರಪ್ಪರವರನ್ನು ಪಕ್ಷದಿಂದ ಉಚ್ಚಾಟಿಸುವಂತೆ ಹೇಳಲು ಅವರಿಗೆ ಯಾವ ನೈತಿಕತೆ ಇಲ್ಲ ಅವರು ಪಕ್ಷಕ್ಕೆ ಬರುವುದಾದರೆ ನಮ್ಮ ಅಭೀಪ್ರಾಯವನ್ನು ಪಕ್ಷದ ಹೈಕಮಾಂಡ್ ಕೇಳಬೇಕು ಆಗ ಪಕ್ಷದ ಕಾರ್ಯಕರ್ತರ ಅಭೀಪ್ರಾಯವನ್ನು ಪಡೆಯಲಾಗುವುದೆಂದು ತಿಳಿಸಿದರು. ನಮ್ಮ ಪಕ್ಷದ ಕಾರ್ಯಕರ್ತರಿಗೆ ಈ ವಿಷಯದ ಬಗ್ಗೆ ಶಾಂತಿಯಿಂದ ಇರುವಂತೆ ಹೇಳಲಾಗಿದೆ ಇವರು ರೊಚ್ಚಿಗೆದ್ದರೆ ಅವರು ಉಳಿಯುವುದಿಲ್ಲ, ಈ ವಿಷಯದ ಬಗ್ಗೆ ಸುಮ್ಮನೆ ಇದ್ದರೆ ಒಳ್ಳೇಯದು ಇಲ್ಲವಾದರೆ ನಾವು ಸಹಾ ಅವರ ಜಾತಕವನ್ನು ಬಿಚ್ಚಿ ಇಡಬೇಕಾಗುತ್ತದೆ ಎಂದು ಸಿದ್ದೇಶ್ ಎಚ್ಚರಿಸಿದರು. ಗೋಷ್ಟಿಯಲ್ಲಿ ಜಿ.ಪಂ. ಮಾಜಿ ಸದಸ್ಯ ತಿಪ್ಪೇಸ್ವಾಮಿ, ಪುರಸಭೆಯ ಮಾಜಿ ಅಧ್ಯಕ್ಷ ಆಶೋಕ್, ತಾ.ಪಂ. ಮಾಜಿ ಸದಸ್ಯ ಶಿವು, ಎಪಿಎಂಸಿ, ಮಾಜಿ ಅಧ್ಯಕ್ಷ ಅಂಕಪ್ಪ, ಪುರಸಭಾ ಸದಸ್ಯರಾದ ಬಸವರಾಜ್ ಯಾದವ್, ಮುರುಗೇಶ್, ಮಂಡಲ ಪ್ರಧಾನ ಕಾರ್ಯದರ್ಶಿ ರೂಪ ಸುರೇಶ್, ಓಬಿಸಿ ಅಧ್ಯಕ್ಷ ಗೀರೀಶ್, ನಗರಾಧ್ಯಕ್ಷ ಪ್ರವೀಣ್, ಮಂಡಲ ಉಪಾಧ್ಯಕ್ಷ ರುದ್ರೇಗೌಡ, ಯುವ ಮೋರ್ಚಾ ಅಧ್ಯಕ್ಷ ಅರುಣ್,ಜಯನಾಯ್ಕ, ರುದ್ರೇಶ್, ಬದರಿನಾಯ್ಕ್, ಚಂದ್ರನಾಯ್ಕ್, ಧೃವಕುಮಾರ್, ವಿಜಯ್ ಸೇರಿದಂತೆ ಇತರರು ಭಾಗವಹಿಸಿದ್ದರು.

ಪ್ರಮುಖ ಸುದ್ದಿ

# ಗೊಲ್ಲರಹಟ್ಟಿಯಲ್ಲಿ ಮೌಢ್ಯಗಳ ವಿರುದ್ಧ ಅರಿವು ಜಾಗೃತಿ

» **ಚಿತ್ರದುರ್ಗ**

ಶುಕ್ರವಾರ ಚಿತ್ರದುರ್ಗ ತಾಲ್ಲೂಕು ಇಸಮುದ್ರ ಗೊಲ್ಲರಹಟ್ಟಿಯಲ್ಲಿ ಅಂತರಾಷ್ಟ್ರೀಯ ಮಹಿಳೆಯರ ವಿರುದ್ಧ ದೌರ್ಜನ್ಯ ತಡೆ ದಿನ ಹಾಗೂ ಮಾನವ ಹಕ್ಕುಗಳು ದಿನಾಚರಣೆ ನಿಮಿತ್ತ 16 ದಿನಗಳ ವಿಶೇಷ ಜಾಗೃತಿ ಅಭಿಯಾನದ ಅಂಗವಾಗಿ ಮೌಢ್ಯ ಪದ್ಧತಿ ನಿವಾರಣೆ ಅರಿವು ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಲಿಂಗತಜ್ಞೆ ಗೀತಾ.ಡಿ ಮಾತನಾಡಿ, ಗೊಲ್ಲರಹಟ್ಟಿಗಳಲ್ಲಿ ನಡೆಯುತ್ತಿರುವ ಹಿಂಸಾಚಾರಗಳು, ಮೌಢ್ಯ ಪದ್ಧತಿಗಳ ಆಚರಣೆಗಳು, ಮಹಿಳೆಯರ ವಿರುದ್ಧದ ಶೋಷಣೆಗಳು, ಮಕ್ಕಳಿಗೆ ಆಗುತ್ತಿರುವ ಶೋಷಣೆಗಳು,ಲಿಂಗಾಧಾರಿತಅಸಮಾನತೆ ಸೇರಿದಂತೆ ಈ ಆಚರಣೆಗಳ ವಿರುದ್ಧ ಇರುವ ಕಾಯ್ದೆ ಕಾನೂನುಗಳು, ಮಕ್ಕಳ ಸಹಾಯವಾಣಿ ಮತ್ತು 1098, ಮಹಿಳಾ ಸಹಾಯವಾಣಿ 181 ತುರ್ತುಸೇವೆ 121 ಮಕ್ಕಳ ಹಕ್ಕುಗಳು, ಡಿ.ವಿ ಕಾಯ್ದೆ, ಈ ಮೌಢ್ಯಚರಣೆಗಳಿಂದ ಮಹಿಳೆಯರಿಗೆ ಆಗುತ್ತಿರುವಂತಹ ಸಾಮಾಜಿಕ ಶೈಕ್ಷಣಿಕ ದೈಹಿಕ ಹಾಗೂ ಮಾನಸಿಕ ಹಿಂಸೆಗಳ ಬಗ್ಗೆ





ಕೂಲಂಕುಶವಾಗಿ ವಿವರಿಸಿದರು.

ಜಿಲ್ಲಾ ಸಂಯೋಜಕ ಚೇತನ್ ಮಾತನಾಡಿ ಗೊಲ್ಲರಹಟ್ಟಿಗಳಲ್ಲಿ ನಡೆಯುತ್ತಿರುವ ಅಮಾನವೀಯ ಗೊಡ್ಡು ಸಂಪ್ರದಾಯಗಳ ವಿರುದ್ಧ ಧ್ವನಿ ಎತ್ತುವಂತೆ ಕಾರ್ಯಕ್ರಮದಲ್ಲಿ ನೆರೆದಿದ್ದ ಎಲ್ಲಾ ಸಭಿಕರಿಗೆ ತಿಳಿ ಹೇಳಿದರು, ಮಹಿಳೆಯರ ಮತ್ತು ಮಕ್ಕಳ ಮೇಲಿನ ಯಾವುದೇ ದೌರ್ಜನ್ಯಗಳ ನಡೆದರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅವರ ನೆರವಿಗೆ ನಿಲ್ಲುತ್ತದೆ ಎಂದು ಮನವರಿಕೆ ಮಾಡಿದರು.

ಗ್ರಾ.ಪಂ.ಕಾರ್ಯದರ್ಶಿ ಮಲ್ಲೇಶಪ್ಪ ಮಾತನಾಡಿ ಗೊಲ್ಲರಹಟ್ಟಿಯ ಮೌಢ್ಯಗಳು ನಿವಾರಣೆಯಾಗದೇ ಹೋದರೆ ಮುಂದಿನ ಪೀಳಿಗೆಯ ಭವಿಷ್ಯ ನಶಿಸುತ್ತದೆ ಎಂದು ತಿಳಿ ಹೇಳಿದರು,

ಕಾರ್ಯಕ್ರಮದಲ್ಲಿ ಭರಮಸಾಗರ ಯೋಜನೆಯ ಮೇಲ್ವಿಚಾರಕಿ ಪ್ರೇಮ, ಗ್ರಾ.ಪಂ.ಸದಸ್ಯರಾದ ರಾಮಚಂದ್ರಪ್ಪ, ನಾಗಪ್ಪ, ಕ್ಯಾತಪ್ಪ ಸೇರಿದಂತೆ ಅಂಗನವಾಡಿ ಕಾರ್ಯಕರ್ತರು ಮತ್ತು ಇಸಮುದ್ರ ಗೊಲ್ಲರಹಟ್ಟಿಯ ಗ್ರಾಮಸ್ಥರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ರೈತ ಭವನದ ಶಂಕುಸ್ಥಾಪನಾ ಸಮಾರಂಭ

» ದಾವಣಗೆರೆ

ದಾವಣಗೆರೆ ರೈತ ಹುತಾತ್ಮರ ಸ್ಮರಣಾರ್ಥ ಸಮಿತಿ(ರಿ) ಹಾಗೂ ದಾವಣಗೆರೆ ಜಿಲ್ಲೆಯ ರೈತಪರ ಸಂಘನೆಗಳ ಆಶ್ರಯದಲ್ಲಿ ಡಿ.7 ರಂದು ಸಂಜೆ 5 ಗಂಟೆಗೆ ರೈತ ಹುತಾತ್ಮತ ಸಮಾಧಿ, ಹುಳಪಿನಕಟ್ಟೆ ಕ್ರಾಸ್, ಪಾರ್ಕ್ ಪಕ್ಕ, ರಾಷ್ಟ್ರೀಯ ಹೆದ್ದಾರಿ-48, ಆನಗೋಡು ಹತ್ತಿರ, ದಾವಣಗೆರೆ ಇಲ್ಲಿ ರೈತ ಭವನದ ಶಂಕುಸ್ಥಾಪನಾ ಸಮಾರಂಭವನ್ನು ಆಯೋಜಿಸಲಾಗಿದೆ. ಸಾಣೇಹಳ್ಳಿಯ ಶಾಖಾಮಠದ ಶ್ರೀತರಳಬಾಳು ಜಗದ್ಗುರುಗಳಾದ ಡಾ.ಶ್ರೀಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಯವರು ದಿವ್ಯ ಸಾನಿಧ್ಯ ವಹಿಸುವರು. ಲೋಕಸಭಾ ಸದಸ್ಯರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರು ಶಂಕುಸ್ಥಾಪನೆಯನ್ನು ನೆರವೇರಿಸುವರು. ರೈತ ಹುತಾತ್ಮತ ಸ್ಮರಣಾರ್ಥ ಸಮಿತಿಯ ಗೌರವಾಧ್ಯಕ್ಷರಾದ ಹೆಚ್ ನಂಜುಂಡಪ್ಪ ಗೌರವಾಧ್ಯಕ್ಷರಾಗಿರುವರು. ರೈತ ಹುತಾತ್ಮರ ಸ್ಮರಣಾರ್ಥ ಸಮಿತಿಯ ಅಧ್ಯಕ್ಷರಾದ ಎನ್.ಜಿ.ಪುಟ್ಟಸ್ವಾಮಿ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಗಣಿ, ಭೂವಿಜ್ಞಾನ ಮತ್ತು ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕರಾದ ಕೆ.ಎಸ್ ಬಸವಂತಪ್ಪ ಪಾಲ್ಗೊಳ್ಳುವರು. ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್, ಉಪವಿಭಾಗಾಧಿಕಾರಿ ಸಂತೋಷ್ ಪಾಟೀಲ್, ತಹಶೀಲ್ದಾರ್ ಡಾ.ಎಂ.ವಿ ಅಶ್ವಥ್, ಎ.ಪಿ.ಎಂ.ಸಿಯ ಕಾರ್ಯದರ್ಶಿ ಹೆಚ್.ಸಿ.ಎಂ ರಾಣಿ ಹಾಗೂ ಇನ್ನಿತರರು ಭಾಗವಹಿಸುವರು.

### ಕನ್ಸಲ್ಟೆಂಟ್ ಇಂಜಿನಿಯರ್‌ಗಳ ಸಭೆ

» ದಾವಣಗೆರೆ

ದಾವಣಗೆರೆ ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಕಟ್ಟಡ ಪರವಾನಿಗೆ ಅರ್ಜಿಗಳನ್ನು ಅಪ್‌ಲೋಡ್ ಮಾಡುವಲ್ಲಿ ಇರುವ ತೊಡಕುಗಳನ್ನು ಸಮಸ್ಯೆಗಳ ಬಗ್ಗೆ ಚರ್ಚಿಸಲು ಡಿಸೆಂಬರ್ 9 ರಂದು ಸಂಜೆ 4 ಗಂಟೆಗೆ ಕನ್ಸಲ್ಟೆಂಟ್ ಇಂಜಿನಿಯರ್‌ಗಳ ಸಭೆಯನ್ನು ಪಾಲಿಕೆ ಕೌನ್ಸಿಲ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

### ನಿಕ್ಷಯ್ ವಾಹನಕ್ಕೆ ಚಾಲನೆ

» ದಾವಣಗೆರೆ

100 ದಿನಗಳ ಕ್ಷಯಪ್ರಕರಣಗಳನ್ನು ಪತ್ತೆ ಹಚ್ಚುವ ಅಭಿಯಾನವನ್ನು ಡಿಸೆಂಬರ್ 7 ರಿಂದ 2025 ರ ಮಾರ್ಚ್ 17 ರವರೆಗೆ ದೇಶಾದ್ಯಂತ ಚಾಲನೆ ನೀಡುತ್ತಿದ್ದು ಡಿ.7 ರಂದು ಮಧ್ಯಾಹ್ನ 3 ಗಂಟೆಗೆ ಲೋಕಸಭಾಸದಸ್ಯರಾದಡಾ.ಪ್ರಭಾಮಲ್ಲಿಕಾರ್ಜುನ್ ಅವರು ತಮ್ಮ ದಾವಣಗೆರೆ ಗೃಹಕಚೇರಿ ಬಳಿ ನಿಕ್ಷಯ್ ವಾಹನಕ್ಕೆ ಚಾಲನೆ ನೀಡುವರು ಎಂದು ಜಿಲ್ಲಾ ಕ್ಷಯ ನಿವಾರಣಾಧಿಕಾರಿಗಳು ತಿಳಿಸಿದ್ದಾರೆ. ಫೋಟೋ ಇದೆ

### ಡಾ.ಎನ್.ಪರಶುರಾಮ್‌ಗೆ 'ಚಿತ್ರಸಂತೆ ರಾಜ್ಯೋತ್ಸವ' ಪುರಸ್ಕಾರ




» ದಾವಣಗೆರೆ

ಬೆಂಗಳೂರಿನ ಸದಾಶಿವ ನಗರದಲ್ಲಿ ನಡೆದ 50ನೇ ಸುವರ್ಣ ಮಹೋತ್ಸವ ಚಿತ್ರಸಂತೆ ರಾಜ್ಯೋತ್ಸವ ಪುರಸ್ಕಾರ ಸಮಾರಂಭದಲ್ಲಿ ನಗರದ ಪ್ರತಿಷ್ಠಿತ ಎಸ್‌ಎಸ್‌ಎಸ್ ಯೋಗ ಕೇಂದ್ರದ ಸಂಸ್ಥಾಪಕ ಅಧ್ಯಕ್ಷರು ಹಾಗೂ ಅಂತಾರಾಷ್ಟ್ರೀಯ ಯೋಗ ಪಟು ಯೋಗಾಚಾರ್ಯ ಡಾ.ಎನ್.ಪರಶುರಾಮ್ ಅವರಿಗೆ 'ಚಿತ್ರಸಂತೆ ರಾಜ್ಯೋತ್ಸವ' ಪುರಸ್ಕಾರ ನೀಡಿ ಸನ್ಮಾನಿಸಲಾಯಿತು.ಯೋಗಾಸನ ಕ್ಷೇತ್ರದಲ್ಲಿ ಸುಮಾರು 28 ವರ್ಷಗಳ ಕಾಲ ಸೇವೆಯನ್ನು ಸಲ್ಲಿಸಿದಂತಹ ಡಾ.ಎನ್.ಪರಶುರಾಮ್ ಅವರಿಗೆ ಪುರಸ್ಕಾರ ನೀಡಿ ಸನ್ಮಾನಿಸಲಾಗಿದೆ. ಈ ಸಂದರ್ಭದಲ್ಲಿ ವಾಸ್ತು ತಜ್ಞ ದಿನೇಶ್ ಗುರೂಜಿ, ಚಲನಚಿತ್ರ ನಿರ್ದೇಶಕ ಮೋಹನ್‌ಕುಮಾರ್, ಚಿತ್ರನಟಿ ಶ್ವೇತಾ ಶ್ರೀವಾತ್ಸವ, ಚಿತ್ರಸಂತೆಯ ಕಾರ್ಯಕ್ರಮದ ರೂವಾರಿ ಗಿರೀಶ್‌ಗೌಡ, ಸಂಗೀತ ನಿರ್ದೇಶಕರು, ಗಾಯಕಿ ಮಾನಸ ವಲ್ಲ ಇದ್ದರು. ದಾವಣಗೆರೆ ಜಿಲ್ಲಾ ಯೋಗ ಒಕ್ಕೂಟದ ಅಧ್ಯಕ್ಷ ವಾಸುದೇವ್ ರಾಯ್ಕರ್, ದಾವಣಗೆರೆ ಎಎಸ್‌ಎಸ್ ಯೋಗ ಫೆಡರೇಷನ್ ಅಧ್ಯಕ್ಷ ರುದ್ರಪ್ಪ, ಉಪಾಧ್ಯಕ್ಷ ಗೋಪಾಲ್ ರಾವ್, ಖಜಾಂಚಿ ಎಸ್.ರಾಜಶೇಖರ್, ನಿರ್ದೇಶಕರಾದ ಜೆ.ಎಸ್.ವೀರೇಶ್, ಎಂ.ವೈ.ಸತೀಶ್, ಅಜ್ಜಯ, ರಾಘವೇಂದ್ರ ಚೌಹಣ್, ರಂಗಪ್ಪ, ನಾಗರಾಜ್, ಸಾವಿತ್ರಮ್ಮ, ಪತ್ರಕರ್ತ ಎ.ಎನ್.ನಿಂಗಪ್ಪ ಹಾಗೂ ಯೋಗ ವಿದ್ಯಾರ್ಥಿಗಳು, ವಿವಿಧ ಸಂಘಟನೆಗಳ ಸದಸ್ಯರು ಅಭಿನಂದನೆ ಸಲ್ಲಿಸಿದ್ದಾರೆ.

# ರೂ.2.05 ಕೋಟಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ವೀರೇಂದ್ರ ಪಪ್ಪಿ ಚಾಲನೆ

» ಚಿತ್ರದುರ್ಗ

ಚಿತ್ರದುರ್ಗ ನಗರಸಭೆ ವ್ಯಾಪ್ತಿಯ ವಿವಿಧ ವಾರ್ಡ್‌ಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶುಕ್ರವಾರ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಹಾಗೂ ನಗರಸಭೆ ಅಧ್ಯಕ್ಷೆ ಬಿ.ಎನ್.ಸುಮಿತಾ ಅವರು ಭೂಮಿಪೂಜೆ ನೆರವೇರಿಸಿದರು.

ಮುಖ್ಯಮಂತ್ರಿಗಳ ವಿಶೇಷ ಅನುದಾನ ರೂ.7.50 ಕೋಟಿ ಚಿತ್ರದುರ್ಗ ನಗರಕ್ಕೆ ಮಂಜೂರಾಗಿದ್ದು, ಶುಕ್ರವಾರ ರೂ.2.05 ಕೋಟಿ ವೆಚ್ಚದ ಸಿ.ಸಿ.ರಸ್ತೆ, ಸಿ.ಸಿ.ಚರಂಡಿ, ಡೆಕ್ ಸ್ಲಾಬ್, ಒಳಚರಂಡಿ, ರಸ್ತೆ ಅಭಿವೃದ್ಧಿ ಕಾಮಗಾರಿ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದರು.



ನಗರದ ವಾರ್ಡ್ ನಂ.32ರ ಐಯುಡಿಪಿ ಲೇಔಟ್‌ನ 4ನೇ ಕ್ರಾಸ್ ರಾಜ್ ಕುಮಾರ್ ಪಾರ್ಕ್ ಹತ್ತಿರ ರೂ.30 ಲಕ್ಷ ವೆಚ್ಚದಲ್ಲಿ ಆರ್.ಸಿ.ಸಿ.ಡೆಕ್ ಸ್ಲಾಬ್ ಹಾಗೂ ಸಿ.ಸಿ. ಚರಂಡಿ ನಿರ್ಮಾಣ ಕಾಮಗಾರಿ, ವಾರ್ಡ್ ನಂ.33ರ ಬುದ್ಧನಗರದ 4, 5ನೇ ಕ್ರಾಸ್‌ಗಳಲ್ಲಿ ರೂ.30 ಲಕ್ಷ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿ, ವಾರ್ಡ್ ನಂ.1ರ ಮೈಲಮ್ಮ ದೇವಸ್ಥಾನದ ಮಾಜಿ ನಗರಸಭೆ ಸದಸ್ಯರಾದ ರಂಗಪ್ಪ ಮನೆಯವರೆಗೆ ಹಾಗೂ ಮೈಲಮ್ಮ ದೇವಸ್ಥಾನದಿಂದ ಅಂಜುಮಾನ್‌ವರೆಗೆ ಹಾಗೂ ಜೋಗಿಮಟ್ಟಿ 6ನೇ ಕ್ರಾಸ್ ಸುಣ್ಣದ ಗುಮ್ಮಿ ಹತ್ತಿರ ರತ್ನಮ್ಮ ಮನೆಯಿಂದ ಕಾಡಪ್ಪ ಮನೆಯವರೆಗೆ ರೂ.30 ಲಕ್ಷದಲ್ಲಿ ಸಿ.ಸಿ.ಚರಂಡಿ, ಡೆಕ್ ಸ್ಲಾಬ್ ಹಾಗೂ ಒಳಚರಂಡಿ ಕಾಮಗಾರಿ, ವಾರ್ಡ್ ನಂ.4ರ ಫಿಲ್ಟರ್ ಹೌಸ್ ಹತ್ತಿರ ಕಂಠಿ ರಶೀದ್ ಮನೆ ಹತ್ತಿರ, ಎನ್.ಡಿ.ಕುಮಾರ್ ಮನೆ ಹತ್ತಿರ, ಕಂಬಳಗೇರಿ ಬೀದಿ ಹತ್ತಿರ, ಬ್ರಹ್ಮಗಿರಿ ಪ್ರೆಸ್ ಹತ್ತಿರ ರೂ.30 ಲಕ್ಷ ವೆಚ್ಚದಲ್ಲಿ ಸಿ.ಸಿ.ಚರಂಡಿ ನಿರ್ಮಾಣ ಕಾಮಗಾರಿ ಹಾಗೂ ಸಿ.ಸಿ.ರಸ್ತೆ ನಿರ್ಮಾಣ ಕಾಮಗಾರಿ, ವಾರ್ಡ್ ನಂ.2ರ ಅಕ್ಕಚ್ಚಮ್ಮ ಬಾವಿ ಅಂಜುಮಾನ್ ಮುಂಭಾಗದಲ್ಲಿ ಮತ್ತು ಇಸ್ತ್ರಿ ನಾಗಣ್ಣ ಮನೆ ಮುಂಭಾಗ, ಬ್ಯಾಂಕ್ ರುದ್ರಣ್ಣ ಮುಂಭಾಗದಲ್ಲಿ ರೂ.10 ಲಕ್ಷ ವೆಚ್ಚದಲ್ಲಿ ಸಿ.ಸಿ.ರಸ್ತೆ, ಚರಂಡಿ, ಒಳಚರಂಡಿ, ಆರ್.ಸಿ.ಸಿ ಸ್ಲಾಬ್ ಹಾಗೂ ಡೆಕ್ ಸ್ಲಾಬ್ ನಿರ್ಮಾಣ ಕಾಮಗಾರಿ, ವಾರ್ಡ್‌ನಂ 3ರ ಕಾಮನಭಾವಿ ಬಡಾವಣೆಯ 1ನೇ ಮುಖ್ಯರಸ್ತೆ ಎಡಭಾಗದಲ್ಲಿ 1ನೇ ಅಡ್ಡರಸ್ತೆ ಗಲ್ಲಿಯಲ್ಲಿ ನಗರಸಭೆ ಸದಸ್ಯರಾದ ಶ್ರೀನಿವಾಸ್ ಅವರ ಮನೆ ಹಿಂಭಾಗ ಕೂಬಾ ನಾಯ್ಕ್ ಮನೆ ಮುಂಭಾಗ ರೂ.30 ಲಕ್ಷ ವೆಚ್ಚದಲ್ಲಿ ಅಂಜುಮಾನ್ ರಸ್ತೆ ಅಭಿವೃದ್ಧಿ ಹಾಗೂ ಮೂಲಭೂತ ಸೌಕರ್ಯ ಕಲ್ಪಿಸುವ ಕಾಮಗಾರಿ, ವಾರ್ಡ್ ನಂ 7ರಲ್ಲಿ ಬುರುಜನಹಟ್ಟಿ ಮಲ್ನಾಡ್ ಚೌಡಮ್ಮ ದೇವಸ್ಥಾನದ ಹತ್ತಿರ ಹಾಗೂ ಮೇಕೆ ಬಂಡೆ ಹತ್ತಿರ ಗಣಚಾರಿ ಶಾಂತಮ್ಮ ಮನೆ ಹತ್ತಿರ ರೂ.20 ಲಕ್ಷ ವೆಚ್ಚದಲ್ಲಿ ಸಿ.ಸಿ.ರಸ್ತೆ ಹಾಗೂ ಡೆಕ್ ಸ್ಲಾಬ್ ನಿರ್ಮಾಣ ಕಾಮಗಾರಿ, ವಾರ್ಡ್ ನಂ.8ರ ಸಿಹಿನೀರು ಹೊಂಡದ ರಸ್ತೆಯ ಬರಗೇರಮ್ಮ ಶಾಲೆ ಮುಂಭಾಗದಿಂದ ಸಿಹಿನೀರು ಹೊಂಡದ ಹಳ್ಳದವರೆಗೆ ರೂ.25 ಲಕ್ಷ ವೆಚ್ಚದಲ್ಲಿ ಸಿ.ಸಿ.ರಸ್ತೆ, ಡೆಕ್ ಸ್ಲಾಬ್ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿದರು.

ಡಸ್ಟ್ ಬಿನ್ ವಿತರಣೆ: ನಗರದ ವಾರ್ಡ್ ನಂ.33ರ ಪ್ರಶಾಂತ ನಗರದಲ್ಲಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರು ಹಸಿ ಕಸ ಒಣ ಕಸ ವಿಂಗಡಿಸಿ ನೀಡಲು 10 ಜನರಿಗೆ ಸಾಂಕೇತಿಕವಾಗಿ ಡಸ್ಟ್ ಬಿನ್ ವಿತರಿಸಿದರು. ರೂ.20 ಲಕ್ಷ ವೆಚ್ಚದಲ್ಲಿ 10,900 ಡಸ್ಟ್ ಬಿನ್ ಖರೀದಿಸಲಾಗಿದೆ.

ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷೆ ಉಪಾಧ್ಯಕ್ಷೆ ಶ್ರೀದೇವಿ ಚಕ್ರವರ್ತಿ, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ನಗರಸಭೆ ಸದಸ್ಯರಾದ ನಾಗಮ್ಮ, ಪೂಜಾ ಯೋಗಿ, ಗೀತಾ, ಚಂದ್ರಶೇಖರ್, ಮೀನಾಕ್ಷಿ, ಶಶಿಧರ್, ತಾರಕೇಶ್ವರಿ, ಗೊಪ್ಪೆ ಮಂಜುನಾಥ್, ನಾಮನಿರ್ದೇಶನ ಸದಸ್ಯರು ಇದ್ದರು.

#### ಹೊಸಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕ್ಲಸ್ಟರ್ ಮಟ್ಟದ ವಿಜ್ಞಾನ ಮೇಳ

## ಗ್ರಾಮೀಣ ವಿದ್ಯಾರ್ಥಿಗಳಲ್ಲಿ ಅಘಾದ ವಿಜ್ಞಾನ ಪ್ರತಿಭೆ

» ಚಳ್ಳಕೆರೆ

ಗ್ರಾಮೀಣ ಭಾಗದ ಸರ್ಕಾರಿ ಶಾಲೆಯ ಮಕ್ಕಳು ಸಹ ತಮ್ಮ ಸಾಮರ್ಥ್ಯವನ್ನು ಯಶಸ್ವಿಯಾಗಿ ವಿವಿಧ ಪ್ರಯೋಗಗಳ ಮೂಲಕ ಸಾಧರ ಪಡಿಸುವಲ್ಲಿ ಯಶಸ್ವಿಯಾಗಿದ್ದಾರೆ. ಇಂದಿನ ವಿಜ್ಞಾನ ಮೇಳದಲ್ಲಿ ವಿದ್ಯಾರ್ಥಿಗಳು ಶಿಕ್ಷಕರ ಸಹಕಾರದಿಂದ ಸಿದ್ಧಪಡಿಸಿದ ಎಲ್ಲಾ ಮಾದರಿಗಳು ವಿದ್ಯಾರ್ಥಿಗಳ ಪ್ರತಿಭೆಯನ್ನು ಹೊರ ತರುವಲ್ಲಿ ಯಶಸ್ವಿಯಾಗಿದೆ. ವಿದ್ಯಾರ್ಥಿಗಳು ಸಂಶೋಧನಾ ಶೀಲರಾದಾಗ ಮಾತ್ರ ವಿಜ್ಞಾನದ ಅಭಿವೃದ್ಧಿ ಸಾಧ್ಯವೆಂದು ಇಒ ಎಚ್.ಶಶಿಧರ ತಿಳಿಸಿದರು.

ಅವರು, ತಾಲೂಕಿನ ತಳಕು ಹೋಬಳಿಯ ಹೊಸಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಅಗಸ್ತ್ಯ ಇಂಟರ್‌ನ್ಯಾಷನಲ್ ಫೌಂಡೇಷನ್ ಟಾಟಾಪವರ್ ಕಂಪನಿ ಮತ್ತು ಶಿಕ್ಷಣ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿಜ್ಞಾನ ಮೇಳವನ್ನು ಉದ್ಘಾಟಿಸಿ ಮಾತನಾಡಿದರು. ನಗರದ ಪ್ರದೇಶದಂತೆ ಗ್ರಾಮೀಣ ಪ್ರದೇಶದ ಶಾಲೆಗಳಲ್ಲಿ ಬೋಧನಾ ಮಟ್ಟ ಹೆಚ್ಚಿಲ್ಲವೆಂಬುವುದನ್ನು ಇಂದಿನ ಮೇಳ ಸುಳ್ಳು ಮಾಡಿದೆ. ನಗರ ಪ್ರದೇಶದ ಮಕ್ಕಳಿಗೆ ಸವಾಲು ಹಾಕುವಂತೆ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಉತ್ತಮ ಮಾದರಿಗಳನ್ನು ತಯಾರಿಸಿ ಪ್ರದರ್ಶನ ಮಾಡಿರುವುದು ಉತ್ತಮ ಬೆಳವಣಿಗೆ ಎಂದರು.



ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಮಾತನಾಡಿ, ತಳಕು ಕ್ಲಸ್ಟರ್ ವ್ಯಾಪ್ತಿಯ ಒಂದರಿಂದ8 ತರಗತಿಯ ಸುಮಾರು ಎಂಟ್ಟತ್ತು ಶಾಲೆಯ ಮಕ್ಕಳು 60ಕ್ಕೂ ಹೆಚ್ಚು ಮಾದರಿಗಳನ್ನು ಇಂದು ಪ್ರದರ್ಶನ ಮಾಡಿದ್ದಾರೆ. ವಿಜ್ಞಾನ ವಿಷಯದಲ್ಲಿ ಎಲ್ಲಾ ಮಕ್ಕಳು ಹಲವಾರು ಹೊಸ, ಹೊಸ ಮಾದರಿಗಳನ್ನು ತಯಾರಿಸಿ ಪ್ರದರ್ಶನ ಮಾಡಿದ್ದಾರೆ. ವಿಜೇತ ಮಕ್ಕಳಿಗೆ ಪ್ರಶಸ್ತಿಪತ್ರ ಹಾಗೂ ಪಾರಿತೋಷಕ ನೀಡಲಾಗಿದೆ. ಗ್ರಾಮೀಣ ಭಾಗದಲ್ಲೂ ಹಲವಾರು ಪ್ರತಿಭೆಗಳು ಇವೆ ಅವುಗಳಿಗೆ ಪ್ರೋತ್ಸಾಹ ಸಿಗಬೇಕಿದೆ. ಈ ನಿಟ್ಟಿನಲ್ಲಿ ಶಿಕ್ಷಕರು ಹಾಗೂ ಅಗಸ್ತ್ಯ ಇಂಟರ್‌ನ್ಯಾಷನಲ್ ಫೌಂಡೇಷನ್ ಟಾಟಾಪವರ್ ಕಂಪನಿಗಳು ಮತ್ತಷ್ಟು ಪ್ರೋತ್ಸಾಹ ನೀಡಬೇಕು ಎಂದರು.

ಕಾರ್ಯಕ್ರಮದಲ್ಲಿ ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಸಿ.ಟಿ.ವೀರೇಶ್, ಅಕ್ಷರದಾಸೋಹ ಅಧಿಕಾರಿ ಮಂಜುನಾಥ, ಅಗಸ್ತ್ಯ ಫೌಂಡೇಷನ್ ಶಿಕ್ಷಕ ಬಸವೇಶ್ವರಪ್ಪ , ಇಸಿಒ ಮಾರುತಿಭಂಡಾರಿ, ದೇವೇಂದ್ರಪ್ಪ, ಎಚ್. ಹನುಮಂತಪ್ಪ, ಸದಾಶಿವಪ್ಪ, ಮನ್ನೇಕೋಟೆ ಪಿಡಿಒ ಗಿರೀಶ್, ಸಿಆರ್‌ಪಿ.ತಿಪ್ಪೇಸ್ವಾಮಿ, ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ಜ್ಯೋತಿರಾಜಣ್ಣ, ಸದಸ್ಯರಾದ ರಾಮು, ಮಂಜುಳಾಮಹಂತೇಶ್, ತಿಪ್ಪೇಸ್ವಾಮಿ, ಎಸ್‌ಡಿಎಂಸಿ ಅಧ್ಯಕ್ಷ ಓಬಣ್ಣ, ಮುಖ್ಯ ಶಿಕ್ಷಕ ಕೆ.ಎಸ್.ಶ್ರೀಕಾಂತ್, ಶಿಕ್ಷಕರಾದ ಚಿಟ್ಟಿಬಾಬು, ನಸ್ರತ್‌ಉನ್ನೀಸ, ಮಂಜುಳಾ, ಗಾಯಿತ್ರಿದೇವಿ, ಆಶಾ ಮುಂತಾದವರು ಉಪಸ್ಥಿತರಿದ್ದರು.



ಡಾ.ಬಿ.ಆರ್.ಅಂಬೇಡ್ಕರ್ ಪರಿನಿಬ್ಬಾಣದ ಅಂಗವಾಗಿ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ.

## ಆಪ್ ತಂತ್ರಾಂಶದ ನೊಂದಣಿ ಸಮೀಕ್ಷೆ ವ್ಯವಸ್ಥೆಗೆ ತರಬೇತಿ



» ದಾವಣಗೆರೆ

ಕೇಂದ್ರ ಸರ್ಕಾರದ ಜನಗಣತಿ ಇಲಾಖೆಯಿಂದ ಆಪ್ ಮೂಲಕ ಜನನ ಮತ್ತು ಮರಣ ಅಂಕಿಅಂಶಗಳನ್ನು ಸಂಗ್ರಹಿಸಲು ಅಂಶಕಾಲಿಕೆ ಗಣತಿದಾರರಿಗೆ ಮಾದರಿ ನೊಂದಣಿ ಕುರಿತಂತೆ ತರಬೇತಿಯನ್ನು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಏರ್ಪಡಿಸಲಾಗಿತ್ತು.

ತರಬೇತಿ ಕಾರ್ಯಗಾರವನ್ನು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿಯವರು ಉದ್ಘಾಟಿಸಿ ಆಪ್ ಮೂಲಕ ಮಾದರಿ ನೊಂದಣಿ ಪದ್ಧತಿಯ ಅವಶ್ಯಕತೆ ಮತ್ತು ಇದರ ಗುಣಮಟ್ಟದ ಕಾರ್ಯದ ಬಗ್ಗೆ ವಿವರಿಸಿದರು. ಕೇಂದ್ರ ಸರ್ಕಾರವು ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರನ್ನು ಅಂಶಕಾಲಿಕ ನೊಂದಣಿದಾರರನ್ನಾಗಿ ಮಾಡಿದ್ದು ಇವರ ಮೂಲಕ ನೇರವಾಗಿ ಜನನ ಮತ್ತು ಮರಣದ ಅಂಕಿಅಂಶಗಳನ್ನು ಸಂಗ್ರಹಿಸುತ್ತದೆ. ಇದಕ್ಕಾಗಿ ಆಪ್ ಮೂಲಕ ಅವರು ಜನನ ಹಾಗೂ ಮರಣದ ಮಾಹಿತಿಯನ್ನು ಸಂಗ್ರಹಿಸಿ ಆಪ್ ಮೂಲಕ ಅಪ್‌ಲೋಡ್ ಮಾಡುವ ಕೆಲಸವನ್ನು ಮಾಡುತ್ತಿದ್ದಾರೆ. ಕೇಂದ್ರ ಜನಗಣತಿ ಇಲಾಖೆಯಿಂದ ದೈನಂದಿನ ಜನನ ಮತ್ತು ಮರಣ ಪ್ರಮಾಣವನ್ನು ಈ ನೊಂದಣಿ ಪದ್ಧತಿಯ ಮೂಲಕ ಮಾಹಿತಿ ಸಂಗ್ರಹಿಸುತ್ತಿದೆ. ಇದರ ಗುಣಮಟ್ಟವನ್ನು ಇನ್ನಷ್ಟು ಹೆಚ್ಚಿಸಲು ಈ ತರಬೇತಿಯನ್ನು ಆಯೋಜಿಸಲಾಗಿದೆ. ಚಿತ್ರದುರ್ಗ, ಚಿಕ್ಕಮಗಳೂರು, ಹಾವೇರಿ, ದಾವಣಗೆರೆ, ಬಳ್ಳಾರಿ ಜಿಲ್ಲೆಯ ಗಣತಿದಾರರಿಗೆ ತರಬೇತಿ ಆಯೋಜಿಸಲಾಗಿದೆಎಂದರು.ಜನನಮತ್ತುಮರಣದಅಂಕಿಅಂಶಗಳನ್ನು ನಿಖರವಾಗಿ ಸಂಗ್ರಹಿಸುವುದರಿಂದ ಸರ್ಕಾರದ ಯೋಜನೆಗಳಿಗೆ ಇದು ಬಹಳ ಉಪಯುಕ್ತವಾಗಿರುವುದರಿಂದ ನಿಖರವಾಗಿ ಮಾಹಿತಿ ಸಂಗ್ರಹಿಸುವ ಕೆಲಸವನ್ನು ಗಣತಿದಾರರು ಮಾಡಬೇಕಾಗಿದೆ ಎಂದರು. ಈ ಕಾರ್ಯಗಾರದಲ್ಲಿ ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಜನಗಣತಿ ಇಲಾಖೆ ಸಾಂಖ್ಯಿಕ ಅಧಿಕಾರಿ ಕೇಶವಮೂರ್ತಿ, ಸಹಾಯಕ ನಿರ್ದೇಶಕರಾದ ಮ್ಯಾಥೀವ್, ಜಿಲ್ಲಾ ಸಾಂಖ್ಯಿಕ ಅಧಿಕಾರಿ ನೀಲಾ ಹಾಗೂ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

### ಪ್ರಮುಖ ಸುದ್ದಿ

# ಪ್ರತಿ ಮನೆಯಲ್ಲಿಯೂ ಡಾ.ಅಂಬೇಡ್ಕರ್ ಪೂಜಿಸಿ

» ಚಿತ್ರದುರ್ಗ

ಸಂವಿಧಾನದ ಮೂಲಕ ಪ್ರತಿಯೊಬ್ಬರಿಗೂ ಸಮಾನತೆ ನೀಡಿರುವ ಡಾ.ಬಿ.ಆರ್. ಅಂಬೇಡ್ಕರ್ ಹಿಂದೂ ಧರ್ಮದಲ್ಲಿ ಹುಟ್ಟಿ, ಹಿಂದೂವಾಗಿ ಸಾಯಲಾರೆ ಎಂದು ಬೌದ್ಧ ಧರ್ಮಕ್ಕೆ ಸೇರಿದರು ಎಂದು ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಹೇಳಿದರು.

ಡಾ.ಬಿ.ಆರ್.ಅಂಬೇಡ್ಕರ್‌ರವರ 68 ನೇ ಮಹಾ ಪರಿನಿರ್ವಾಣ ದಿನದ ಅಂಗವಾಗಿ ಸಿದ್ದಾಪುರದಲ್ಲಿ ಶುಕ್ರವಾರ ಮಹಾನಾಯಕ ದಲಿತ ಸೇನೆ ಗ್ರಾಮ ಘಟಕ ಉದ್ಘಾಟಿಸಿ ಮಾತನಾಡಿದರು.



ಕೇವಲ ದಲಿತರೆನ್ನುವ ಕಾರಣಕ್ಕಾಗಿ ಡಾ.ಬಿ.ಆರ್.ಅಂಬೇಡ್ಕರ್ ಜೀವನದಲ್ಲಿ ಸಾಕಷ್ಟು ನೋವು, ಹಿಂಸೆ, ಅವಮಾನ, ಅಸ್ಪೃಶ್ಯತೆಯನ್ನು ಅನುಭವಿಸಿದರು. ಯಾರು ಪಡೆಯದಷ್ಟು ಪದವಿಗಳನ್ನು ಪಡೆದಿದ್ದ ಅಂಬೇಡ್ಕರ್‌ರವರಲ್ಲಿದ್ದ ಜ್ಞಾನ, ವಿದ್ವತ್ತನ್ನು ಗುರುತಿಸಿ ಬರೋಡಾದ ರಾಜ ಶಿಕ್ಷಣಕ್ಕಾಗಿ ವಿದೇಶಕ್ಕೆ ಕಳಿಸಿ ಅಲ್ಲಿಂದ ಹಿಂದಿರುಗಿದ ನಂತರ ತಮ್ಮ ದೇಶದಲ್ಲಿಯೇ ಹುದ್ದೆ ಕೊಟ್ಟಾಗ ಅಲ್ಲಿನ ಜನರ ಕಿರುಕುಳ ತಾಳದೆ ಅಂಬೇಡ್ಕರ್ ಮುಂಬೈಗೆ ಹಿಂದಿರುಗಿದರು. ಶೋಷಣೆ, ಅವಮಾನ ತಾಳದೆ ಹಿಂದೂ ಧರ್ಮ ತ್ಯಜಿಸಿ 1956, ಅ.14 ರಂದು ಬೌದ್ಧ ಧರ್ಮಕ್ಕೆ ಸೇರ್ಪಡೆಗೊಂಡರು ಎಂದು ತಿಳಿಸಿದರು. ಹಿಂದೂ ಧರ್ಮದ ಅವನತಿಗೆ ಕೇವಲ ಕ್ರೈಸ್ತರು, ಇಸ್ಲಾಂ ಧರ್ಮದವರಷ್ಟೆ ಕಾರಣರಲ್ಲ. ಹಿಂದೂಗಳಲ್ಲಿನ ಕೆಲವು ಜಾತಿವಾದಿಗಳಿಂದಲೂ ಹಿಂದೂ ಧರ್ಮಕ್ಕೆ ಅಪಾಯವಿದೆ. ಪ್ರತಿ ಮನೆಯಲ್ಲಿಯೂ ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರನ್ನು ಪೂಜಿಸಿ ಅವರ ಆದರ್ಶ, ತತ್ವ, ಸಿದ್ದಾಂತಗಳನ್ನು ಮೈಗೂಡಿಸಿಕೊಂಡಾಗ ಮಾತ್ರಸಂವಿಧಾನವನ್ನು ನಿಜವಾಗಿಯೂ ಗೌರವಿಸಿದಂತಾಗುತ್ತದೆ ಎಂದರು.ಜಾತಿ ಅಮಲನ್ನು ತಲೆಗೆ ಏರಿಸಿಕೊಂಡಿರುವ ಹಿಂದೂ ಧರ್ಮದ ಕೆಲವರಿಂದ ದಲಿತರ ಮೇಲೆ ನಿರಂತರವಾಗಿ ದೌರ್ಜನ್ಯ, ದಬ್ಬಾಳಿಕೆ ನಡೆಯುತ್ತಿದೆ. ಚಿಕ್ಕಮಗಳೂರು ತಾಲ್ಲೂಕಿನ ನರಸೀಪುರ ಗ್ರಾಮದ ತಿರುಮಲ ದೇವಸ್ಥಾನದೊಳಗೆ ದಲಿತ ಯುವಕನೋರ್ವ ಪ್ರವೇಶಿಸಿದ ಎನ್ನುವ ಕಾರಣಕ್ಕಾಗಿ ಎರಡು ದಿನಗಳಿಂದಲೂ ಅಲ್ಲಿ ಪೂಜೆ ಮಾಡಿಲ್ಲವೆನ್ನುವುದಾದರೆ ಇದ್ಯಾವ ನ್ಯಾಯ ಎಂದು ಪ್ರಶ್ನಿಸಿದ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಡಾ.ಬಿ.ಆರ್.ಅಂಬೇಡ್ಕರ್‌ರವರ ಆಸೆಯಂತೆ ಶಿಕ್ಷಣ, ಸಂಘಟನೆ, ಹೋರಾಟದಿಂದ ದಲಿತರು ಜೀವನದಲ್ಲಿ ಬದಲಾವಣೆ ಕಂಡುಕೊಳ್ಳಬೇಕು. ಶಿಕ್ಷಣಕ್ಕಾಗಿ ಸರ್ಕಾರ ಎಲ್ಲಾ ರೀತಿಯ ಸೌಲಭ್ಯಗಳನ್ನು ನೀಡುತ್ತಿದೆ. ಸದ್ಬಳಕೆ ಮಾಡಿಕೊಳ್ಳುವಂತೆ ಕರೆ ನೀಡಿದರು. ಮಹಾನಾಯಕ ದಲಿತ ಸೇನೆ ಸಂಸ್ಥಾಪಕ ರಾಜ್ಯಾಧ್ಯಕ್ಷ ಮಂಜುನಾಥ್ ತಾಳಿಕೆರೆ, ಪ್ರಧಾನ ಕಾರ್ಯದರ್ಶಿ ಹೊಳೆಯಪ್ಪ ಕೆ.ಸಾಕ್ಯ, ಜಿಲ್ಲಾ ಉಪಾಧ್ಯಕ್ಷ ದುರುಗೇಶ್, ಗ್ರಾಮ ಘಟಕದ ಅಧ್ಯಕ್ಷ ಲೋಕೇಶ್, ಸಿದ್ದಾಪುರ ಗ್ರಾಮದ ಮುಖಂಡರಾದ ಅಂಜಿನಪ್ಪ, ಜಗದೀಶ್, ಪ್ರಭುಲಿಂಗ ವೇದಿಕೆಯಲ್ಲಿದ್ದರು.

# ಎಲ್ಲಿ ಜೀವನ ನಡೆವುದೋ ಅದೇ ನನ್ನೂರು.......

## ಯಾರು ಸ್ನೇಹದಿ ಬರುವವರೋ ಅವರೇ ನನ್ನೋರು...........
## ಒಂದು ಚಿತ್ರ ಗೀತೆಯ ಹಾಡಿನ ಸಾಲುಗಳಿವು........

ಮೊದಲೆಲ್ಲ ಸಾಮಾನ್ಯ ವಾಗಿ ಮನುಷ್ಯ ಅಲೆಮಾರಿಯಾಗಿದ್ದ. ನಂತರ ಒಂದು ಪ್ರದೇಶದಲ್ಲಿ ನೆಲೆ ನಿಂತು ಯಾವುದೋ ಉದ್ಯೋಗ ಮಾಡಿ ಒಂದು ಕಡೆ ಶಾಶ್ವತವಾಗಿ ನೆಲೆನಿಂತ. ಅದು ಎಷ್ಟರಮಟ್ಟಿಗೆ ಎಂದರೆ ಆತನ ಹುಟ್ಟು ಬದುಕು ಸಾವು ಎಲ್ಲವೂ ಒಂದೇ ಪ್ರದೇಶದಲ್ಲಿ ನಡೆಯುತ್ತಿತ್ತು. ಆ ಸ್ಥಳದಿಂದ ಆತ ದೂರ ಸರಿಯುತ್ತಿದ್ದುದು ತೀರಾ ಅಪರೂಪ. ಭಾವನಾತ್ಮಕವಾಗಿ ಆತ ಆ ಪ್ರದೇಶದ ಬಗ್ಗೆ ತುಂಬಾ ಅಭಿಮಾನ ಹೊಂದಿರುತ್ತಿದ್ದ.......

ಯಾವಾಗ ಜನಸಂಖ್ಯೆ ಹೆಚ್ಚಾಗಿ ಬದುಕಿನ ಅನಿವಾರ್ಯತೆಗಾಗಿ ಕೈಗಾರಿಕೀಕರಣ ಮತ್ತು ಅದರಿಂದಾಗಿ ಸೃಷ್ಟಿಯಾದ ನಗರೀಕರಣ ಪ್ರಾರಂಭವಾಯಿತೋ ಆಗ ಮತ್ತೆ ವಲಸೆ ಪ್ರಾರಂಭವಾಗಿ ಆ ಪ್ರದೇಶದ ಭಾವನಾತ್ಮಕ ಸಂಬಂಧ ಸಡಿಲವಾಗತೊಡಗಿತು.......

ತಾತ ಮುತ್ತಾತಂದಿರು ಹುಟ್ಟಿ ಬೆಳೆದ ಊರಿನಿಂದ ಮಕ್ಕಳು, ಮಕ್ಕಳು ಇದ್ದ ಸ್ಥಳದಿಂದ ಮೊಮ್ಮಕ್ಕಳು, ಅಲ್ಲಿಂದ ಮರಿ ಮಕ್ಕಳು ಬೇರೆ ಬೇರೆ ವಾಸ ಸ್ಥಾನಗಳನ್ನು ಹುಡುಕಿಕೊಂಡು ಹೊರಟರು. ನಮ್ಮ ಪೂರ್ವಿಕರ ನಿಜವಾದ ಪ್ರದೇಶಗಳು ಪತ್ತೆ ಹಚ್ಚುವುದೇ ಕಷ್ಟವಾಯಿತು. ಎಲ್ಲೋ ಅಪರೂಪದಲ್ಲಿ ನೂರು ಇನ್ನೂರು ವರ್ಷಗಳಷ್ಟು ದೀರ್ಘಕಾಲ ಒಂದೇ ಸ್ಥಳದಲ್ಲಿ ವಾಸವಾಗಿರುವ ಕೆಲವು ಕುಟುಂಬಗಳು ಉದಾಹರಣೆಗೆ ಸಿಗಬಹುದು........

ಇಂತಹ ಸಂದರ್ಭ ಮತ್ತು ಸನ್ನಿವೇಶದಲ್ಲಿ ಮೇಲಿನ ಸಿನಿಮಾ ಹಾಡು ನೆನಪಾಗುತ್ತದೆ. ಒಂದು ಊರಿನಲ್ಲಿ, ಒಂದೇ ಮನೆಯಲ್ಲಿ ಹತ್ತು ಇಪ್ಪತ್ತು ವರ್ಷ ವಾಸಿಸುವುದೇ ಒಂದು ದೊಡ್ಡ ಸಾಧನೆಯಾಗಿದೆ. ಸ್ವಂತ ಮನೆಯವರು ಆಯ್ಕೆಗಳಿಲ್ಲದೆ ಸ್ವಲ್ಪ ದೀರ್ಘಕಾಲ ಒಂದೇ ಮನೆಯಲ್ಲಿ ಉಳಿಯಬಹುದು. ಬಾಡಿಗೆ ಮನೆಯವರಿಗೆ, ವರ್ಗಾವಣೆ ಇರುವ ಉದ್ಯೋಗ ವ್ಯವಹಾರ ಮಾಡುವವರಿಗೆ, ಹೊಸ ಅವಕಾಶಗಳ ಹುಡುಕಾಟದವರಿಗೆ ಐದು ಹತ್ತು ವರ್ಷಗಳೇ ದೊಡ್ಡ ಸಮಯವಾಗಿರುತ್ತದೆ........

ನಮ್ಮ ಮೂಲ ಬೇರುಗಳು ಸಡಿಲವಾದಂತೆ ಭಾವನಾತ್ಮಕ ಸಂಬಂಧಗಳು ಕಡಿಮೆಯಾಗುತ್ತದೆ.

ಈ ಪ್ರಕ್ರಿಯೆಯ ಮುಂದುವರಿದ ಭಾಗವಾಗಿ ಇದಕ್ಕಿಂತ ಅಪಾಯಕಾರಿಯಾದ ಮನುಷ್ಯ ಸಂಬಂಧಗಳು ಸಡಿಲವಾಗತೊಡಗಿರುವುದು. ಪ್ರತ್ಯೇಕ ವಾಸಸ್ಥಳಗಳು ಮನುಷ್ಯರ ನಡುವಿನ ಗಾಡ ಸಂಬಂಧಗಳನ್ನು ಸಹ ಪ್ರತ್ಯೇಕಿಸಿದೆ. ಅವಿಭಕ್ತ ಕುಟುಂಬಗಳು ಸಣ್ಣ ಕುಟುಂಬಗಳಾಗಿ, ಅವು ಏಕ ಕೋಣೆಯ ಚಿಕ್ಕ ಮನೆಗಳಾಗಿ ಕೊನೆಗೆ ಹಾಸ್ಟೆಲ್ ಮತ್ತು ಪಿ.ಜಿ. ಕೇಂದ್ರಗಳಾಗಿ ರೂಪಾಂತರ ಹೊಂದುತ್ತಿವೆ. ಅಪಾರ್ಟ್ ಮೆಂಟ್ ಸಮುಚ್ಚಯಗಳಲ್ಲಿ ಪ್ರತ್ಯೇಕ ಊರಿನ ಗುಣಲಕ್ಷಣಗಳನ್ನು ಕಾಣುತ್ತಿದ್ದೇವೆ........

ಬದಲಾವಣೆ ಜಗದ ನಿಯಮ. ಅದನ್ನು ಸ್ವೀಕರಿಸಬೇಕು ನಿಜ. ಆದರೆ ಯಾವ ದಿಕ್ಕಿನತ್ತ ಈ ಬದಲಾವಣೆ ಸಾಗುತ್ತಿದೆ ಎಂಬುದನ್ನು ಆತ್ಮಾವಲೋಕನ ಮಾಡಿಕೊಳ್ಳಬೇಕಲ್ಲವೇ ? ಸರಿ ಸುಮಾರು 60/80 ವರ್ಷಗಳ ಬದುಕಿನ ಬಹಳಷ್ಟು ಸಮಯವನ್ನು ನಮ್ಮ ನಿಯಂತ್ರಣವಿಲ್ಲದೆ, ಊಟ, ವಸತಿ, ವಾಹನಗಳಿಗಾಗಿ ನಮ್ಮ ಇಚ್ಚೆಗೆ ವಿರುದ್ಧವಾಗಿ ಜೀವನದ ಗುಣಮಟ್ಟ ಮತ್ತು ನೆಮ್ಮದಿಯ ಗುಣಮಟ್ಟ ಎರಡನ್ನೂ ಬಲಿಕೊಟ್ಟು ಜೀವಿಸುವುದು ನಮ್ಮ ಹುಟ್ಟನ್ನೇ ಪ್ರಶ್ನಿಸುವಂತೆ ಮಾಡುತ್ತದೆ. ಸಾರ್ಥಕ ಜೀವನ ಅಂದರೆ ಏನು ಎಂಬ ಪ್ರಶ್ನೆ ಕಾಡತೊಡಗುತ್ತದೆ. ಊಟ ವಸತಿಗಾಗಿ ಬದುಕೇ, ಗಂಡ ಹೆಂಡತಿ ಮಕ್ಕಳಿಗಾಗಿ ಬದುಕೇ, ನಮ್ಮ ಆಸಕ್ತಿಯ ಚಟುವಟಿಕೆಗಳಿಗಾಗಿ ಬದುಕೇ, ಏನಾದರೂ ಸಾಧಿಸುವುದು ಬದುಕೇ ಎಂಬ ಆಲೋಚನೆಗಳ ನಡುವೆ ಬದುಕುವುದೇ ಸಾಧನೆಯಾಗುವ ಹಂತಕ್ಕೆ ನಮ್ಮಲ್ಲಿ ಬಹುತೇಕರು ಬಂದು ತಲುಪಿದ್ದಾರೆ..........

ಪರಿಸ್ಥಿತಿ ಹೀಗೇ ಮುಂದುವರಿದರೆ ಮುಖ್ಯವಾಗಿ ಯುವ ಸಮುದಾಯ ಯಂತ್ರ ಮಾನವರಾಗುವ ನಿರ್ಭಾವುಕ ಸ್ಥಿತಿ ತಲುಪಬಹುದು. ಮನೆ, ವಾಹನ, ಶಿಕ್ಷಣ, ಆರೋಗ್ಯ ಇವುಗಳಿಗಾಗಿ ಇರುವ ಹಣಕಾಸಿನ ಬ್ಯಾಂಕಿಂಗ್ ಇಎಂಐ ವ್ಯವಸ್ಥೆ ಅನೇಕ ನಗರ ಪ್ರದೇಶದ ಜನರ ಇಡೀ ಬದುಕನ್ನು ನಿಯಂತ್ರಿಸುತ್ತಿರುವುದನ್ನು ನಾವು ನೋಡುತ್ತಿದ್ದೇವೆ. ಸಾಲದ ಸುತ್ತಲೇ ಜೀವನವನ್ನು ಕಟ್ಟಿಹಾಕಿ ಮಾನವ ಸಂಪನ್ಮೂಲಗಳನ್ನು ತಮ್ಮ ಹಿತಾಸಕ್ತಿಯ ಬಳಕೆಗಾಗಿ ದುಡಿಸಿಕೊಳ್ಳುತ್ತಿರುವ ವರ್ಗದ ಬಗ್ಗೆ ನಾವು ಜಾಗೃತವಾಗಬೇಕಿದೆ. ಕೆಲವೇ ಕೆಲವು ಜನರ ಸುಖಕ್ಕಾಗಿ ಇಡೀ ಸಮೂಹ ದುಡಿಯುವುದು ನಿಜಕ್ಕೂ ದುರಂತ. ಹೋಗಲಿ ಆ ದುಡಿತದಿಂದ ನೆಮ್ಮದಿಯಾದರೂ ಸಿಗುತ್ತಿದೆಯೇ ?....... ಎಲ್ಲರ ಮೇಲೆ ಅಪನಂಬಿಕೆ, ಆತ್ಮಹತ್ಯೆ ಅಪರಾಧ ಅಪಘಾತ ಅನಾರೋಗ್ಯ ಹೆಚ್ಚಳ, ಇದೇ ಒತ್ತಡದ ಕಾರಣದಿಂದ ಹಣದ ಮಹತ್ವ ಹೆಚ್ಚಾಗಿ ಮಾನವಿಯ ಮೌಲ್ಯಗಳ ಕುಸಿತ. ನೆಮ್ಮದಿಗಾಗಿ ಹುಡುಕಾಟ. ಈಗ ನಮ್ಮ ಬದುಕಿನ ದಿಕ್ಕುಗಳನ್ನು ಈ ಎಲ್ಲಾ ಹಿಂದಿನ ಅನುಭವಗಳ ಆಧಾರದಲ್ಲಿ ಮತ್ತೊಂದು ದಿಕ್ಕಿನತ್ತ ಸಾಗಿಸುವ ಪ್ರಯತ್ನ ಮಾಡಬೇಕಿದೆ. ಬದುಕಿನ ಅತ್ಯಮೂಲ್ಯ ಸಮಯವನ್ನು ಒಂದು ಆಹ್ಲಾದಕರ, ಹೆಚ್ಚು ನಗುವಿನಿಂದ ಕೂಡಿದ, ನಮ್ಮ ಆಸಕ್ತಿಯ ವಿಷಯಗಳಲ್ಲಿ ತೊಡಗಿಸಿಕೊಳ್ಳುವ, ಹೆಚ್ಚು ಒತ್ತಡವಿಲ್ಲದ, ಇಎಂಐ ಗಳಲ್ಲಿ ಬಂಧಿಯಾಗದ ಜೀವನ ಶೈಲಿಯನ್ನು ರೂಪಿಸಿಕೊಳ್ಳಬೇಕಿದೆ........

ಸ್ಪರ್ಧೆ ಇರಲಿ ಆದರೆ ಬದುಕೇ ಸ್ಪರ್ಧೆಯಾಗುವುದು ಬೇಡ. ಅದು ಜೂಜಾಟವಾಗುತ್ತದೆ. ಆಗ ಕೆಲವೇ ಕೆಲವು ಜನ ಆ ಜೂಜಾಟದಲ್ಲಿ ಲಾಭ ಮಾಡಿ ಉಳಿದವರು ದಿವಾಳಿಯಾಗುತ್ತಾರೆ. ಹಣದ ದಿವಾಳಿತನವೇ ಬದುಕಿನ ದಿವಾಳಿತನವಾಗುತ್ತದೆ. ನಮಗರಿವಿಲ್ಲದೆ ನಾವು ನಮ್ಮ ಮೇಲಿನ ನಿಯಂತ್ರಣ ಕಳೆದುಕೊಂಡು ಬೇರೆಯವರ ದಾಳವಾಗುತ್ತಿದ್ದೇವೆ. ಜೀತದಾಳುಗಳಾಗುವ ಮುನ್ನ ದಯವಿಟ್ಟು ಎಚ್ಚೆತ್ತುಕೊಳ್ಳಿ.......

ಇರುವುದೊಂದೇ ಬದುಕು. ಅದನ್ನು ಅರ್ಥಪೂರ್ಣವಾಗಿ ಸಾರ್ಥಕ ಪಡಿಸಿಕೊಳ್ಳಿ.........

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,
ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,
ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ ಪರಿವರ್ತನೆಗಾಗಿ,
ಮನಸ್ಸುಗಳ ಅಂತರಂಗದ ಚಳವಳಿ.





ಯಾವಾಗ ಜನಸಂಖ್ಯೆ ಹೆಚ್ಚಾಗಿ ಬದುಕಿನ ಅನಿವಾರ್ಯತೆಗಾಗಿ ಕೈಗಾರಿಕೀಕರಣ ಮತ್ತು ಅದರಿಂದಾಗಿ ಸೃಷ್ಟಿಯಾದ ನಗರೀಕರಣ ಪ್ರಾರಂಭವಾಯಿತೋ ಆಗ ಮತ್ತೆ ವಲಸೆ ಪ್ರಾರಂಭವಾಗಿ ಆ ಪ್ರದೇಶದ ಭಾವನಾತ್ಮಕ ಸಂಬಂಧ ಸಡಿಲವಾಗತೊಡಗಿತು.......

» ಲೇಖನ
ವಿವೇಕಾನಂದ.
ಹೆಚ್.ಕೆ.
9844013068

## ಅಖಿಲ ಭಾರತ ಗೃಹರಕ್ಷಕದಳ ದಿನಾಚರಣೆ

» ದಾವಣಗೆರೆ

ದಾವಣಗೆರೆ ಜಿಲ್ಲೆಯ ಗೃಹರಕ್ಷಕ ದಳದಿಂದ ಡಿಸೆಂಬರ್ 7 ರಂದು ಸಂಜೆ 4 ಗಂಟೆಗೆ ಪೊಲೀಸ್ ಕವಾಯತು ಮೈದಾನದಲ್ಲಿ ಅಖಿಲ ಭಾರತ ಗೃಹರಕ್ಷಕ ದಳ ದಿನಾಚರಣೆಯನ್ನು ಏರ್ಪಡಿಸಲಾಗಿದೆ. ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಗೌರವ ರಕ್ಷೆ ಸ್ವೀಕರಿಸುವರು. ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಜಿಲ್ಲಾ ಹೋಂಗಾರ್ಡ್ ಕಮಾಂಡೆಂಟ್ ಡಾ; ಸುಜಿತ್ ಕುಮಾರ್ ಎಸ್.ಹೆಚ್. ಅಧ್ಯಕ್ಷತೆ ವಹಿಸುವರು.

## ಲೋಕ ಅದಾಲತ್

» ಹಾವೇರಿ

ಹಾವೇರಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿ ಡಿಸೆಂಬರ್ 14 ರಂದು ಬೆಳಿಗ್ಗೆ 10.30 ಗಂಟೆಗೆ ರಾಷ್ಟ್ರೀಯ ಲೋಕ್ ಅದಾಲತ್ ಆಯೋಜಿಸಲಾಗಿದೆ ಎಂದು ಜಿಲ್ಲಾ ಗ್ರಾಹಕರ ಆಯೋಗದ ಸಹಾಯಕ ನೋಂದಣಾಧಿಕಾರಿ ಮತ್ತು ಸಹಾಯಕ ಆಡಳಿತಾಧಿಕಾರಿಗಳು ತಿಳಿಸಿದ್ದಾರೆ.

### ಡಾ; ಬಿ.ಆರ್.ಅಂಬೇಡ್ಕರ್ ರವರ 68ನೇ ಮಹಾ ಪರಿನಿರ್ವಾಣ ದಿನಾಚರಣೆ

# ಶೋಷಿತ ಧ್ವನಿಯಾದವರು ಅಂಬೇಡ್ಕರ್

» ದಾವಣಗೆರೆ

ಜ್ಞಾನವಂತರು, ಸಮಾಜ ಸುಧಾರಕರು, ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ರವರು ನಿರಂತರ ಅಧ್ಯಯನದಿಂದ ತಮ್ಮ ಜ್ಞಾನದ ವ್ಯಾಪ್ತಿಯನ್ನು ಹೆಚ್ಚಿಸಿಕೊಂಡರು. ತಮ್ಮ ಜ್ಞಾನ, ಶಿಕ್ಷಣ ಅಸ್ತ್ರದಿಂದ ಶೋಷಿತ, ದಮನಿತ ವರ್ಗಗಳಿಗೆ ಧ್ವನಿಯಾಗಿದ್ದಾರೆ ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಹೇಳಿದರು.



ಶುಕ್ರವಾರ(ಡಿ.6) ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆಯಿಂದ ಜಿಲ್ಲಾಡಳಿತ ಕಚೇರಿಯಲ್ಲಿ ಆಯೋಜಿಸಲಾದ ಡಾ; ಬಿ.ಆರ್.ಅಂಬೇಡ್ಕರ್ ರವರ 68 ನೇ ಮಹಾ ಪರಿನಿರ್ವಾಣ ದಿನಾಚರಣೆಯಲ್ಲಿ ಅಂಬೇಡ್ಕರರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು. ಬಾಬಾ ಸಾಹೇಬರ ಮೂಲಮಂತ್ರಗಳಾದ ಶಿಕ್ಷಣ, ಸಂಘಟನೆ, ಹೋರಾಟ ಎಂಬ ಧ್ಯೇಯ ವಾಕ್ಯಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಸಮಾಜದಲ್ಲಿರುವ ಶೋಷಿತರು, ತುಳಿತಕ್ಕೊಳಪಟ್ಟ ವರ್ಗಗಳಿಗೆ ನ್ಯಾಯ ಕೊಡಬೇಕಾಗಿದೆ ಎಂದರು. ಪರಿನಿರ್ವಾಣ ಎಂಬುವುದು ಬೌದ್ಧಧರ್ಮದ ಮುಖ್ಯ ತತ್ವ ಹಾಗೂ ಗುರಿಗಳಲ್ಲಿ ಒಂದಾಗಿದೆ. ಸಂಸ್ಕೃತದಲ್ಲಿ ಪರಿನಿರ್ವಾಣಕ್ಕೆ ಸಾವಿನ ನಂತರ ನಿರ್ವಾಣ ಎಂದರ್ಥ ಇದು ದೇಹವು ಸತ್ತ ನಂತರ ನಿರ್ವಾಣದ ಸಾಧನೆಯನ್ನು ಸೂಚಿಸುತ್ತದೆ. ಬೌದ್ಧಧರ್ಮದ ಪ್ರಕಾರ ನಮ್ಮ ಜೀವನದ ಕರ್ಮವನ್ನು ದೇಹದ ಮರಣದ ನಂತರ ಆತ್ಮದ ಮೂಲಕ ಮುಂದಿನ ಜನ್ಮಕ್ಕೆ ಸಾಗಿಸಲಾಗಿತ್ತದೆ. ಅಂಬೇಡ್ಕರರು ಅಪಾರ ಜ್ಞಾನ ಹೊಂದಿದ್ದರಿಂದಲೇ ಅವರು ಪ್ರಪಂಚ ಗುರುತಿಸುವಂತಹ ವ್ಯಕ್ತಿಯಾಗಿದ್ದರು, ಅದರಿಂದಾಗಿ ಇಡೀ ಪ್ರಪಂಚ ಅವರನ್ನು ಗೌರವಿಸುತ್ತಿದೆ. ಇಂತಹ ಮಹಾನ್ ವ್ಯಕ್ತಿಗಳ ಆದರ್ಶಗಳನ್ನು ನಾವುಗಳು ಪ್ರತಿ ಹೆಜ್ಜೆಯಲ್ಲಿಯೂ ಪಾಲಿಸಬೇಕಾಗಿದೆ ಎಂದು ಹೇಳಿದರು.ಕಾರ್ಯಕ್ರಮಕ್ಕೂ ಮೊದಲು ವಿದ್ಯಾರ್ಥಿಭವನದ ಬಳಿಯ ಅಂಬೇಡ್ಕರ್ ವೃತ್ತದಲ್ಲಿನ ಡಾ; ಬಿ.ಆರ್. ಅಂಬೇಡ್ಕರ್ ರವರ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಹೆಗ್ಗೆರೆ ರಂಗಪ್ಪ ಮತ್ತು ನೀರ್ಥಡಿ ಸಂಗಡಿಗರಿಂದ ಅಂಬೇಡ್ಕರ್ ಕುರಿತು ಗಾಯನ ಪ್ರಸ್ತುತ ಪಡಿಸಿದರು. ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಸಿಇಓ ಸುರೇಶ್.ಬಿ.ಇಟ್ನಾಳ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ನಾಗರಾಜ, ಡಿಡಿಪಿಐ ಕೊಟ್ರೇಶ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ರವಿಚಂದ್ರ, ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಮುಖಂಡರಾದ ರವಿನಾರಾಯಣ, ನಂದಿಗಾವಿ ಶ್ರೀನಿವಾಸ್, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿ, ಸಿಬ್ಬಂದಿಗಳು, ಅಂಬೇಡ್ಕರ್ ಅಭಿಮಾನಿಗಳು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T